# ಸಚಿವ ಸಂಪುಟ ವಿಸ್ತರಣೆಯಲ್ಲಿ ಹೈಕಮಾಂಡ್ ನಿರ್ಧಾರವೇ ಅಂತಿಮ

• ಉದಯವಾಹಿನಿ, ಬೆಂಗಳೂರು

ಸಚಿವ ಸ್ಥಾನಕ್ಕಾಗಿ ಕಾಂಗ್ರೆಸ್ ಶಾಸಕರು ನಡೆಸುತ್ತಿರುವ ಲಾಬಿಗೆ ಮನ್ನಣೆ ನೀಡದಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಕಾಂಗ್ರೆಸ್‌ಹೈಕಮಾಂಡ್ ಸೂಚನೆ ನೀಡಿರುವುದಾಗಿ ತಿಳಿದುಬಂದಿದ್ದು, ರಾಜ್ಯ ನಾಯಕತ್ವದೊಂದಿಗೆ ಮತ್ತಷ್ಟು ಸಮಾಲೋಚನೆ ನಡೆಸದೆ ಸಚಿವ ಸಂಪುಟ ವಿಸ್ತರಣೆ ಕುರಿತು ಹೈಕಮಾಂಡ್ ಸ್ವತಃ ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ.


ಉದಯವಾಹಿನಿ ಚಿತ್ರ

ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಲಹೆಗಳನ್ನು ಪಡೆದು ಸಚಿವ ಸ್ಥಾನಗಳ ಪಟ್ಟಿಯನ್ನು ಸಿದ್ಧಪಡಿಸಿದ್ದಾರೆ. ಈಗ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರ ಅನುಮೋದನೆ ಪಡೆದ ಬಳಿಕ ಹೆಸರುಗಳನ್ನು ಅಧಿಕೃತವಾಗಿ ಘೋಷಿಸುವುದು ಮಾತ್ರ ಬಾಕಿಯಿದೆ ಎಂದು ಮೂಲಗಳು ತಿಳಿಸಿವೆ. ಕರ್ನಾಟಕದ ರಾಜಕೀಯ ಪರಿಸ್ಥಿತಿಯ ಬಗ್ಗೆ ಸುರ್ಜೇವಾಲಾ ಅವರಿಗೆ ಸಂಪೂರ್ಣ ಅರಿವಿದ್ದು, 2028ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಅನುಕೂಲವಾಗುವಂತೆ ಯಾರನ್ನು ಸಚಿವರನ್ನಾಗಿ ಮಾಡಬೇಕು ಎಂಬುದರ ಬಗ್ಗೆ ಅವರಿಗೆ ಸ್ಪಷ್ಟ ತಿಳುವಳಿಕೆ ಇದೆ ಎಂದು ಮೂಲಗಳು ಹೇಳಿವೆ. ಆದ್ದರಿಂದ ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚಿಸಲು ಯಾವುದೇ ರಾಜ್ಯ ನಾಯಕರನ್ನು ದೆಹಲಿಗೆ ಕರೆಯುವ ಸಾಧ್ಯತೆ ಕಡಿಮೆ ಎಂದು ಮೂಲಗಳು ತಿಳಿಸಿವೆ.

ರಂದೀಪ್ ಸುರ್ಜೇವಾಲಾ ಅವರೊಂದಿಗೆ ಉತ್ತಮ ಹೊಂದಾಣಿಕೆ ಹೊಂದಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಯುವ ಹಾಗೂ ಹೊಸ ಮುಖಗಳಿಗೆ ಅವಕಾಶ ಕಲ್ಪಿಸುವ ವಿಷಯದಲ್ಲಿ ಮೇಲುಗೈ ಸಾಧಿಸುವ ಸಾಧ್ಯತೆಯಿದೆ. ರಾಹುಲ್ ಗಾಂಧಿ ಅವರೂ ಇದೇ ಅಭಿಪ್ರಾಯವನ್ನು ಹೊಂದಿದ್ದಾರೆ ಎನ್ನಲಾಗಿದೆ.

### ಜುಲೈ 10ರೊಳಗೆ ಡಿ.ಕೆ.ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆ

ಎಲ್ಲವೂ ಯೋಜನೆಯಂತೆ ನಡೆದರೆ, ಜುಲೈ ಮೂರನೇ ವಾರದಲ್ಲಿ ಆರಂಭವಾಗುವ ಸಾಧ್ಯತೆಯಿರುವ ವಿಧಾನಮಂಡಲದ ಮುಂಗಾರು ಅಧಿವೇಶನಕ್ಕೂ ಮುನ್ನ, ಜುಲೈ 10ರೊಳಗೆ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆ ನಡೆಯುವ ಸಾಧ್ಯತೆಯಿದೆ.

## ಸಿದ್ದರಾಮಯ್ಯ ಭೇಟಿಯಾಗಿ ನೋವು ಹಂಚಿಕೊಂಡ ಶಾಸಕ ಪ್ರದೀಪ್ ಈಶ್ವರ್; ಧೈರ್ಯ ತುಂಬಿದ ಮಾಜಿ ಸಿಎಂ

• ಉದಯವಾಹಿನಿ, ಬೆಂಗಳೂರು

ಚಿಕ್ಕಬಳ್ಳಾಪುರ ಶಾಸಕರಾದ ಪ್ರದೀಪ್ ಈಶ್ವರ್ ಅವರು ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಕೆಂಪೇಗೌಡ ಜಯಂತಿ ವೇಳೆ ನಡೆದ ಘಟನೆಯನ್ನು ವಿವರಿಸಿದರು. ಜೆಡಿಎಸ್, ಬಿಜೆಪಿ ಕಾರ್ಯಕರ್ತರು ಚಪ್ಪಲಿ ಎಸೆದಿದ್ದಲ್ಲದೆ ತಮ್ಮ ಹಾಗೂ ತಮ್ಮ ಕುಟುಂಬವನ್ನು ನಿಂದಿಸಿದ್ದನ್ನು ವಿವರಿಸಿ ಶಾಸಕ ನೋವು ಹಂಚಿಕೊಂಡಿದ್ದಾರೆ. ಈ ವೇಳೆ ಪ್ರದೀಪ್ ಈಶ್ವರ್ ಅವರಿಗೆ ಧೈರ್ಯ ತುಂಬಿದ ಸಿದ್ದರಾಮಯ್ಯ ಅವರು, ರಾಜಕಾರಣದಲ್ಲಿ ಇಂತಹ ಘಟನೆಗಳು ಸಾಮಾನ್ಯ. ಇಂಥವನ್ನು ಎದುರಿಸಬೇಕು. ಇದರಿಂದ ಧೃತಿಗೆಡಬೇಡಿ. ನಿಮ್ಮೊಂದಿಗೆ ನಾವಿದ್ದೇವೆ ಎಂದರು.ಇದೇ ವೇಳೆ ಗೃಹ ಸಚಿವರಾದ ಪ್ರಿಯಾಂಕ್ ಖರ್ಗೆ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಸಿದ್ದರಾಮಯ್ಯ ಅವರು, ಘಟನೆ ಬಗ್ಗೆ ಸೂಕ್ತ ತನಿಖೆ ನಡೆಸಬೇಕು ಎಂದು ಸೂಚಿಸಿದ್ದಾರೆ.

## ಪತಿಗಿಂತ ಪತ್ನಿ ಆರ್ಥಿಕವಾಗಿ ಸಬಲವಾಗಿದ್ದರೆ ಡಿವೋರ್ಸ್ ಬಳಿಕ ಜೀವನಾಂಶ ನೀಡಬೇಕಾಗಿಲ್ಲ; ಹೈಕೋರ್ಟ್



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಪತಿಗಿಂತ ಹೆಚ್ಚು ಸಂಪಾದಿಸುವ ಪತ್ನಿಗೆ ಜೀವನಾಂಶ ನೀಡಬೇಕಾದ ಅಗತ್ಯ ಇಲ್ಲ ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ಆದೇಶ ನೀಡಿದೆ. ಪತ್ನಿ ತನಗಿಂತ ಹೆಚ್ಚಿನ ಸಂಬಳ ಪಡೆಯುತ್ತಿದ್ದರೂ ಆಕೆಗೆ ಜೀವನಾಂಶ ನೀಡುವಂತೆ ಆದೇಶಿಸಿದ ಕೆಳಹಂತಕದ ಕೋರ್ಟ್ ತೀರ್ಪು ಪ್ರಶ್ನಿಸಿ ವ್ಯಕ್ತಿಯೊಬ್ಬರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ಪತ್ನಿ, ಪತಿಗಿಂತ ಹೆಚ್ಚು ಸಂಪಾದಿಸಿದಾಗ, ವಿಚಾರಣಾ ನ್ಯಾಯಾಲಯಗಳು ತಕ್ಷಣ ಜೀವನಾಂಶ ನೀಡುವಂತೆ ಆದೇಶಿಸಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದೆ.

ಪತಿ ಸಂಬಳವೇ ಪತ್ನಿಗಿಂತ ಕಡಿಮೆಯಿದ್ದಾಗ ಜೀವನಾಂಶಕ್ಕೆ ಬಾಧ್ಯಸ್ಥಳಲ್ಲ ಎಂದು ನ್ಯಾಯಮೂರ್ತಿ ಡಾ.ಚಿಲ್ಲಕೂರ್ ಸುಮಲತಾರಿದ್ದ ಹೈಕೋರ್ಟ್ ಪೀಠ ಅಭಿಪ್ರಾಯ ಪಟ್ಟಿದ್ದು, ಜೀವನಾಂಶ ನೀಡಲು ಸೂಚಿಸಿದ್ದ ವಿಚಾರಣಾ ನ್ಯಾಯಾಲಯದ ಆದೇಶವನ್ನು ರದ್ದುಪಡಿಸಿದೆ. ಪತಿಯು ಪತ್ನಿಗೆ ಮಾಸಿಕ 20 ಸಾವಿರ ರೂ. ಜೀವನಾಂಶ ನೀಡಬೇಕೆಂದು ವಿಚಾರಣಾ ನ್ಯಾಯಾಲಯ ನೀಡಿದ್ದ ಆದೇಶವವನ್ನು ನ್ಯಾಯಾಲಯ ರದ್ದು ಮಾಡಿದೆ.

ಪ್ರಕರಣದ ವಿವರಗಳನ್ನು ಅಲೋಕಿಸಿದ ಬಳಿಕ ನ್ಯಾಯಪೀಠ, ಮಹಿಳೆಯರಿಗೆ ಪುರುಷರು ಜೀವನಾಂಶ ನೀಡಬೇಕೆಂಬ ಕೇವಲ ಲಿಂಗ ಆಧಾರಿತ ಊಹೆಗಳ ಮೇಲೆ ನ್ಯಾಯಾಲಯಗಳು ಜೀವನಾಂಶ ನೀಡಲು ಒಲವು ತೋರಬಾರದು. ವಿಶೇಷವಾಗಿ ಮಹಿಳೆಗೆ ಅಂತಹ ಆರ್ಥಿಕ ನೆರವು ಅಗತ್ಯವಿಲ್ಲದಿದ್ದಾಗ ನ್ಯಾಯಾಲಯಗಳು ಪರಿಸ್ಥಿತಿ ಅವಲೋಕಿಸಿ ಜೀವನಾಂಶ ಆದೇಶಗಳನ್ನು ಹೊರಡಿಸಬೇಕಾಗುತ್ತದೆ, ಎಂದು ಆದೇಶಿಸಿದೆ.

## ಪ್ರತಿ ಮನೆಗೆ ನಮೂನೆ ಪತ್ರ ವಿತರಣೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜಕೀಯ ವಲಯದಲ್ಲಿ ಪರ–ವಿರೋಧ ಚರ್ಚೆಯ ಹೊರತಾಗಿಯೂ ಮಂಗಳವಾರ ದಿಂದ ರಾಜ್ಯದಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಆರಂಭಗೊಳ್ಳಲಿದ್ದು, ಗಣತಿದಾರರು ಮನೆ ಬಾಗಿಲಿಗೆ ತೆರಳಿ ಸಮೀಕ್ಷೆ ನಡೆಸಲಿದ್ದಾರೆ. ಈ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯ ಚುನಾವಣಾಧಿಕಾರಿ ಅನ್ಬು ಕುಮಾರ್, ಜೂನ್ 30ರಿಂದ ಜುಲೈ 29ರವರೆಗೆ ರಾಜ್ಯದ 5.54 ಕೋಟಿ ಮತದಾರರ ಮನೆ ಬಾಗಿಲಿಗೆ ತೆರಳಿ ಎನ್ಯೂಮರೇಷನ್ ಫಾರ್ಮ್ ವಿತರಿಸುವ ಮಹತ್ವಾಕಾಂಕ್ಷಿ ಕಾರ್ಯಕ್ರಮಕ್ಕೆ ಚುನಾವಣಾ ಇಲಾಖೆ ಸಕಲ ಸಿದ್ಧತೆ ಪೂರ್ಣಗೊಳಿಸಿದೆ.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಸಂಪೂರ್ಣ ಪಾರದರ್ಶಕ ವಾಗಿರಲಿದ್ದು, ಎಷ್ಟು ಫಾರ್ಮ್ ವಿತರಿಸಲಾಗಿದೆ, ಎಷ್ಟು ಫಾರ್ಮು ಮರಳಿ ಬಂದಿವೆ, ಎಷ್ಟು ಡಿಜಿಟಲೀಕರಣಗೊಂಡಿವೆ.

ಗೈರುಹಾಜರಿ, ಸ್ಥಳಾಂತರ, ಮರಣ ಅಥವಾ ನಕಲಿ ದಾಖಲಾತಿಗಳ ಕಾರಣದಿಂದ ಎಷ್ಟು ಫಾರ್ಮ್ ಸಂಗ್ರಹವಾಗಿಲ್ಲ ಎಂಬ ಮಾಹಿತಿ ಸಹಿತ ಮತಗಟ್ಟೆ ಮಟ್ಟದವರೆಗೆ ಸಾರ್ವಜನಿಕವಾಗಿ ಪ್ರಕಟಿಸಲಾಗುವುದು ಎಂದರು. ರಾಜ್ಯದಲ್ಲಿ ಒಟ್ಟು 59,050 ಬೂತ್ ಮಟ್ಟದ ಅಧಿಕಾರಿಗಳು ಹಾಗೂ 7550 ಮೇಲ್ವಿಚಾರಕರು ಸೇರಿದಂತೆ 68,123ಕ್ಕೂ ಹೆಚ್ಚು ಅಧಿಕಾರಿಗಳು ಈ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಈಗಾಗಲೇ ಅಧಿಕಾರಿಗಳು, ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಬೂತ್ ಮಟ್ಟದ ಏಜೆಂಟರಿಗೆ ತರಬೇತಿ ನೀಡಲಾಗಿದೆ.

## ಬಾಕಿ ಹಣ ಬಿಡುಗಡೆಗೆ ಸಿಎಂಗೆ ಗುತ್ತಿಗೆದಾರರ ಮನವಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಹಲವು ವರ್ಷಗಳಿಂದ ಬಾಕಿ ಉಳಿದಿರುವ ಕಾಮಗಾರಿಗಳ ಬಿಲ್‌ಗಳನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಹಾಗೂ ಗುತ್ತಿಗೆದಾರರು ಎದುರಿಸುತ್ತಿರುವ ವಿವಿಧ ಆಡಳಿತಾತ್ಮಕ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳು ಇಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು. ಮಾರ್ಚ್ 6, 2026ರಂದು ಫ್ರೀಡಂ ಪಾರ್ಕ್‌ನಲ್ಲಿ ನಡೆದ ರಾಜ್ಯಮಟ್ಟದ ಬೃಹತ್ ಪ್ರತಿಭಟನೆಯ ವೇಳೆ ಸರ್ಕಾರ ಸಮಸ್ಯೆಗಳನ್ನು ಬಗೆಹರಿಸುವ ಭರವಸೆ ನೀಡಿತ್ತು. ಆದರೆ, ಇದುವರೆಗೆ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳದ ಕಾರಣ ಮತ್ತೊಮ್ಮೆ ಸರ್ಕಾರದ ಗಮನ ಸೆಳೆಯಲಾಗಿದೆ ಎಂದು ಸಂಘದ ಮುಖಂಡರು ತಿಳಿಸಿದ್ದಾರೆ.

ಸಂಘದ ಪ್ರಕಾರ, 2021–22ರಿಂದ 2023–24ರವರೆಗೆ ವಿವಿಧ ಇಲಾಖೆಗಳಲ್ಲಿ ಸುಮಾರು 37,370.76 ಕೋಟಿ ಮೊತ್ತದ ಕಾಮಗಾರಿ ಬಿಲ್‌ಗಳು ಬಾಕಿ ಉಳಿದಿವೆ. ಲೋಕೋಪಯೋಗಿ, ಜಲಸಂಪನ್ಮೂಲ, ಸಣ್ಣ ನೀರಾವರಿ, ನಗರಾಭಿವೃದ್ಧಿ, ವಸತಿ, ಕಾರ್ಮಿಕ ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಸೇರಿದಂತೆ ಹಲವು ಇಲಾಖೆಗಳ ಬಾಕಿ ಹಣವನ್ನು ತಕ್ಷಣ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಲಾಗಿದೆ.

## ‘ಮತದಾನ ಹಕ್ಕು ಕಳೆದುಕೊಂಡರೆ ಸರ್ಕಾರಿ ಸೌಲಭ್ಯಗಳೂ ಕೈತಪ್ಪಬಹುದು’

# ಸಿಎಂ ಜನತೆಗೆ ಎಚ್ಚರಿಕೆ

**ನಾಗರಿಕರು ಈ ಪ್ರಮಾಣಪತ್ರವನ್ನು ಆನ್‌ಲೈನ್ ಮತ್ತು ಆಫ್‌ಲೈನ್ ಎರಡೂ ವಿಧಾನಗಳಲ್ಲಿ ಪಡೆಯಬಹುದು**

“ಮತದಾನದ ಹಕ್ಕು ಎಂದರೆ ಬದುಕುವ ಹಕ್ಕು. ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಆಧರಿಸಿ ಅರ್ಹರಲ್ಲದ ಪಡಿತರ ಚೀಟಿದಾರರನ್ನು ಪರಿಶೀಲಿಸಿ ಪಟ್ಟಿಯಿಂದ ತೆಗೆದುಹಾಕುವಂತೆ ಆದೇಶಿಸಲಾಗಿದೆ. ಇದೇ ರೀತಿಯ ಕ್ರಮಗಳನ್ನು ಇತರ ರಾಜ್ಯಗಳೂ ಕೈಗೊಳ್ಳುತ್ತಿವೆ. ಮತದಾನದ ಹಕ್ಕು ಕಳೆದುಕೊಂಡರೆ ಸರ್ಕಾರಿ ಸೌಲಭ್ಯಗಳನ್ನೂ ಕಳೆದುಕೊಳ್ಳಬೇಕಾಗುತ್ತದೆ.
ಸಿಎಂ ಡಿಕೆ ಶಿವುಕುಮಾರ

### ಅರ್ಜಿ ಸಲ್ಲಿಸಿ ಪ್ರಮಾಣಪತ್ರ

ಕಂದಾಯ ಇಲಾಖೆ ಪ್ರಕಾರ, ಶಾಶ್ವತ ನಿವಾಸ ಪ್ರಮಾಣಪತ್ರವು ಅಧಿಕೃತ ವಿಳಾಸದ ದಾಖಲೆಯಾಗಿ ಕಾರ್ಯನಿರ್ವಹಿಸುತ್ತದೆ. ನಾಗರಿಕರು ಸೇವಾ ಸಿಂಧು ಪೋರ್ಟಲ್ ಮೂಲಕ ಅಥವಾ ಅಟಲ್ ಜನಸ್ನೇಹಿ ಕೇಂದ್ರಗಳು, ನಾಡಕಚೇರಿಗಳು, ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಿ ಪ್ರಮಾಣಪತ್ರ ಪಡೆಯಬಹುದು.

## ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ


ಉದಯವಾಹಿನಿ ಚಿತ್ರ

### ಕುಟುಂಬದವರ ಪರವಾಗಿ ಒಬ್ಬರು ಸಹಿ ಮಾಡಿದರೂ ಅರ್ಜಿ ಸ್ವೀಕಾರ

“ನೀವು ನಿಮ್ಮ ಹೆಸರಿನಲ್ಲಿ ತಿದ್ದುಪಡಿ ಮಾಡಿಕೊಳ್ಳಲು ಅವಕಾಶವಿದೆ. ಬಿಎಲ್‌ಎ, ಬಿಎಲ್‌ಓ ಹಾಗೂ ಮೇಲ್ವಿಚಾರಕರು ಈಗಾಗಲೇ ವಾಟ್ಸಪ್ ಗ್ರೂಪ್ ಮಾಡಿಕೊಂಡಿದ್ದಾರೆ. ಕುಟುಂಬದ ಸದಸ್ಯರ ಪೈಕಿ ಒಬ್ಬರು ಸಹಿ ಮಾಡಿದರೂ ಸಾಕು. ಕುಟುಂಬದವರ ಪರವಾಗಿ ಒಬ್ಬರೇ ಎಲ್ಲರ ಅರ್ಜಿ ತುಂಬಬಹುದು. ಅದನ್ನು ಸ್ವೀಕಾರ ಮಾಡಿಕೊಳ್ಳಲಾಗುವುದು. ನಿಮ್ಮ ಫೋಟೋ ಬದಲಾಯಿಸಿಕೊಳ್ಳಬೇಕಾದರೆ ಅರ್ಜಿಯಲ್ಲಿ ಹೊಸ ಫೋಟೋ ನೀಡಬಹುದು. ಹೊಸ ಮತದಾರರು ನಿವಾಸ ದೃಢೀಕರಣ ಪತ್ರ ನೀಡಬೇಕು.

ಕರ್ನಾಟಕ ಸರ್ಕಾರ ರಾಜ್ಯದ ಜನರಿಗೆ ಅಗತ್ಯ ಪ್ರಮಾಣಪತ್ರ ನೀಡಲು ಮುಂದಾಗಿದೆ. ಎಲ್ಲರೂ ತಮ್ಮ ಮತದಾನದ ಹಕ್ಕು ಉಳಿಸಿಕೊಳ್ಳಬೇಕು. ಉಳಿಸಿಕೊಳ್ಳದಿದ್ದರೆ ಸರ್ಕಾರ ಸೌಲಭ್ಯ, ಕಾರ್ಯಕ್ರಮಗಳನ್ನು ಪಡೆಯುವುದು ಕಷ್ಟವಾಗಲಿದೆ” ಎಂದು ಮಾಹಿತಿ ನೀಡಿದರು.

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಸಿಎಂ ಡಿಕೆ ಶಿವಕುಮಾರ್ ಮನೆಯಿಂದಲೇ ಇಂದು ಸಿಬ್ಬಂದಿ ಎಸ್‌ಐಆರ್ ಆರಂಭ ಮಾಡಿದರು. ಇದೇ ವೇಳೆ, ‘ಹೇಗೆ ಲಾಗಿನ್ ಮಾಡಬೇಕು ಹೇಳಿ, ಡೌನ್ ಲೋಡ್ ಮಾಡಿ’ ಎಂದು ಸಿಎಂ ಸೂಚಿಸಿದರು. ‘ನನ್ನ ಫೋನ್‌ನಲ್ಲೇ ಹೇಗೆ ಮಾಡುವುದು ತಿಳಿಸಿಕೊಡಿ’ ಎಂದು ಅವರು ಸೂಚಿಸಿದರು. ಅಧಿಕಾರಿಗಳು ಅವರ ಫೋನ್‌ನಲ್ಲೇ ಆಪ್‌ಡೌನ್‌ಲೋಡ್ ಮಾಡಿ ತಿಳಿಸಿಕೊಟ್ಟರು. ಫೋನ್‌ನಲ್ಲಿ ಆ್ಯಪ್ ಯೂಸ್ ಮಾಡುವುದು ಸ್ವಲ್ಪ ಜನರಿಗೆ ಗೊತ್ತಾಗಬೇಕು, ಸ್ವಲ್ಪ ಕನ್ಫ್ಯೂಸ್ ಆಗುತ್ತದೆ ಎಂದು ಸಿಎಂ ಹೇಳಿದರು. ಸ್ವತಃ ತಾವೇ ಎಸ್‌ಐಆರ್ ಎನುಮರೇಷನ್ ಫಾರ್ಮ್ ಭರ್ತಿ ಮಾಡಿದರು.

ಕರ್ನಾಟಕದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಆರಂಭವಾಗಿರುವ ಹಿನ್ನೆಲೆಯಲ್ಲಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಾಗರಿಕರು ತಮ್ಮ ಮತದಾನದ ಹಕ್ಕು ಕಳೆದುಕೊಳ್ಳದಂತೆ ಎಚ್ಚರಿಕೆ ನೀಡಿದ್ದಾರೆ. ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವುದನ್ನು ಖಚಿತಪಡಿಸಿಕೊಳ್ಳುವಂತೆ ಕರೆ ನೀಡಿದ ಅವರು, ಮತದಾನದ ಹಕ್ಕು ಕಳೆದುಕೊಂಡರೆ ಸರ್ಕಾರಿ ಸೌಲಭ್ಯಗಳನ್ನೂ ಕಳೆದುಕೊಳ್ಳುವ ಸಾಧ್ಯತೆ ಇದೆ ಎಂದು ಹೇಳಿದರು.

ಎಸ್‌ಐಆರ್ ಪ್ರಕ್ರಿಯೆಗೆ ನೆರವಾಗುವ ಉದ್ದೇಶದಿಂದ ರಾಜ್ಯ ಸರ್ಕಾರ ಶಾಶ್ವತ ನಿವಾಸ ಪ್ರಮಾಣಪತ್ರಗಳನ್ನು ನೀಡಲು ತೀರ್ಮಾನಿಸಿದೆ. ಈ ಕುರಿತು ಕಂದಾಯ ಇಲಾಖೆ ಮತದಾನದ ಹಕ್ಕು ಕಳೆದುಕೊಳ್ಳದಂತೆ ಎಚ್ಚರಿಕೆ. ನಾಗರಿಕರು ಈ ಪ್ರಮಾಣಪತ್ರವನ್ನು ಆನ್‌ಲೈನ್ ಮತ್ತು ಆಫ್‌ಲೈನ್ ಎರಡೂ ವಿಧಾನಗಳಲ್ಲಿ ಪಡೆಯಬಹುದು.

ಭಾರತ ಚುನಾವಣಾ ಆಯೋಗವು ರಾಜ್ಯಾದ್ಯಂತ ಮನೆ–ಮನೆಗೆ ತೆರಳಿ ಮತದಾರರ ಗಣತಿ ಕಾರ್ಯವನ್ನು ಮಂಗಳವಾರದಿಂದ ಆರಂಭಿಸಿದ್ದು, ಇದು ಜುಲೈ 29ರವರೆಗೆ ನಡೆಯಲಿದೆ.

ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕ್ಕುಮಾರ್ ಅವರು, ಈ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ರಾಜ್ಯದ 5.5 ಕೋಟಿಗೂ ಅಧಿಕ ಮತದಾರರನ್ನು ಒಳಗೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

### ಕರ್ನಾಟಕದ ಮತದಾರರಿಗೆ ಮಾತ್ರ ಗ್ಯಾರಂಟಿ ಯೋಜನೆ

ಕರ್ನಾಟಕದ ವಿಚಾರದಲ್ಲಿ ಈ ಪ್ರಕ್ರಿಯೆ ಬಹಳ ಪ್ರಮುಖವಾಗಿದೆ ಎಂದು ಕೇಳಿದಾಗ, “ಬೇರೆ ರಾಜ್ಯಗಳಲ್ಲಿ ಸರ್ಕಾರದ ಸೌಲಭ್ಯಗಳನ್ನು ಕೇವಲ ಮತದಾರರಿಗೆ ಮಾತ್ರ ನೀಡುತ್ತಿದ್ದು, ಮತದಾನ ಹಕ್ಕು ಇಲ್ಲದವರಿಗೆ ಸೌಲಭ್ಯ ಹಿಂಪಡೆಯಲಾಗುತ್ತಿದೆ. ಅದೇ ವ್ಯವಸ್ಥೆ ರಾಜ್ಯದಲ್ಲೂ ಬರಬಹುದು ಎಂದು ತಿಳಿಸಿದರು. ಇಲ್ಲಿನ ಮತದಾರರಿಗೆ ನಾವು ಗ್ಯಾರಂಟಿ ನೀಡಬಹುದು. ಬೇರೆ ರಾಜ್ಯದ ಮತದಾರರಿಗೆ ನಾವು ಯಾಕೆ ಗ್ಯಾರಂಟಿ ನೀಡಬೇಕು ನಮ್ಮ ರಾಜ್ಯದವರಿಗೆ ಮಾತ್ರ ಗ್ಯಾರಂಟಿ ನೀಡಬೇಕು ಎಂಬುದು ನಮ್ಮ ಆಲೋಚನೆ” ಎಂದು ತಿಳಿಸಿದರು.

### ಏನಿದು ಎನ್ಯೂಮರೇಷನ್ ಫಾರ್ಮ್

ಬಿಎಲ್‌ಒಗಳು, ಗಣತಿ ನಮೂನೆಗಳನ್ನು ದ್ವಿಪತ್ರಿಯಲ್ಲಿ ಪ್ರತಿ ಮತದಾರರ ಮನೆಗೆ ತಲುಪಿಸುತ್ತಾರೆ. ಮತದಾರರ ಪಟ್ಟಿಯಲ್ಲಿರುವಂತೆ ಭಾವಚಿತ್ರ, ಹೆಸರು, ಮತಗಟ್ಟೆ ಸಂಖ್ಯೆ, ವಿಧಾನಸಭಾ ಕ್ಷೇತ್ರದ ಹೆಸರು ಈ ಅರ್ಜಿಯಲ್ಲಿ ಮುದ್ರಣವಾಗಿರುತ್ತದೆ. ಪ್ರತಿ ಮತದಾರರಿಗೂ ನೀಡುವ ಅರ್ಜಿಯಲ್ಲಿ ಕ್ಯೂ ಆರ್ ಕೋಡ್ ವಿಭಿನ್ನವಾಗಿರುತ್ತದೆ. ಬಿಎಲ್ ಒ ಆ್ಯಪ್ ಮೂಲಕ ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿದರೆ ಮತದಾರರ ಮಾಹಿತಿ ಲಭ್ಯವಾಗುತ್ತದೆ. ಒಂದು ವೇಳೆ ಮತದಾರರ ಭಾವಚಿತ್ರ ಹಳೆಯದಾಗಿದ್ದರೆ ಎನ್ಯೂಮರೇಷನ್ ಅರ್ಜಿಯೊಂದಿಗೆ ಹೊಸ ಭಾವಚಿತ್ರ ನೀಡಬಹುದು. ಇಲ್ಲದಿದ್ದರೆ ಬಿಎಲ್‌ಒಗಳೇ ಆ್ಯಪ್ ಮೂಲಕ ಭಾವಚಿತ್ರ ಪಡೆದುಕೊಳ್ಳುತ್ತಾರೆ. ೨೦೦೨ರ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇದ್ದರೆ ಅದರ ವಿವರವನ್ನು ನೀಡಬೇಕು. ಇಲ್ಲದಿದ್ದರೆ ತಮ್ಮ ಸಂಬಂಧಿಯ (ತಂದೆ, ತಾತ ಇತ್ಯಾದಿ) ಮಾಹಿತಿ ಒದಗಿಸಬೇಕು. ಅರ್ಜಿಯಲ್ಲಿ ಮತದಾರರು ಸಹಿ ಅಥವಾ ಎಡಗೈ ಹೆಬ್ಬೆರಳಿನ ಗುರುತು ಹಾಕಬಹುದು. ಒಂದು ವೇಳೆ ಮತದಾರರು ಆ ಸಂದರ್ಭದಲ್ಲಿ ಲಭ್ಯವಿಲ್ಲದಿದ್ದರೆ ಕುಟುಂಬದಲ್ಲಿನ ವಯಸ್ಕ ಸದಸ್ಯರು ಸಹಿ ಮಾಡಿ ಬಿಎಲ್‌ಒಗಳಿಗೆ ಅರ್ಜಿ ಹಸ್ತಾಂತರಿಸಬಹುದು. ೨೦೦೨ರ ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದಿದ್ದರೆ ಅಥವಾ ಡೇಟಾ ಹೊಂದಾಣಿಕೆ ಆಗದಿದ್ದರೆ ಚುನಾವಣಾಧಿಕಾರಿ ನೋಟಿಸ್ ನೀಡಿ ಅಗತ್ಯ ದಾಖಲೆಗಳನ್ನು ಕೇಳುತ್ತಾರೆ.

## ಸಭೆಗೆ ಬರಿಗೈಲಿ ಬಂದ ಅಧಿಕಾರಿಗೆ ತರಾಟೆ; ಜಿಬಿಎ ಕರ್ತವ್ಯದಿಂದ ಬಿಡುಗಡೆಗೆ ಸಚಿವ ಕೃಷ್ಣ ಭೈರೇಗೌಡ ಖಡಕ್ ಸೂಚನೆ

• ಉದಯವಾಹಿನಿ, ಕೆಆರ್‌ಪುರ

ನಗರದಲ್ಲಿ ಬೀದಿ ನಾಯಿಗಳ ಸಂತಾನಹರಣ ಶಸ್ತ್ರಚಿಕಿತ್ಸೆಗೆ ಸಂಬಂಧಪಟ್ಟಂತೆ ಇಂದು ಸಭೆಯಲ್ಲಿ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಭೈರೇಗೌಡ ಅವರು ಅಧಿಕಾರಿಗಳನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದ್ದಾರೆ.ಅಗತ್ಯ ಅಂಕಿ–ಅಂಶಗಳಿಲ್ಲದೆ ಬರಿಗೈಲಿ ಸಭೆಗೆ ಬಂದ ಅಧಿಕಾರಿಯನ್ನ ಜಿಬಿಎ ಕರ್ತವ್ಯದಿಂದಲೇ ಬಿಡುಗಡೆ ಮಾಡುವಂತೆ ಸ್ಥಳದಲ್ಲೇ ಸೂಚನೆ ನೀಡಿದರು.

ಸಚಿವ ಕೃಷ್ಣ ಭೈರೇಗೌಡ ಅವರು ಇಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಇಲಾಖಾ ಪರಿಶೀಲನೆ ಸಭೆ ನಡೆಸಿದ್ದರು. ಈ ವೇಳೆ ಪಶುಸಂಗೋಪನೆ ಇಲಾಖೆಯ ಕಾರ್ಯವೈಖರಿಯನ್ನು ಪರಿಶೀಲನೆ ನಡೆಸಿದರು. ಇಲಾಖೆಯಲ್ಲಿ 19 ಮಂದಿ ಅಧಿಕಾರಿಗಳಿದ್ದರೂ ಸಚಿವರು ಕರೆದ ಸಭೆಗೆ ಕನಿಷ್ಠ ಅಂಕಿ–ಅಂಶಗಳನ್ನು ಇಲ್ಲದೆ ಬರಿಗೈಲಿ ಬಂದಿದ್ದರು.

ಇದಕ್ಕೆ ಕೋಪಗೊಂಡ ಸಚಿವ ಕೃಷ್ಣ ಭೈರೇಗೌಡ ‘ಅಗತ್ಯ ದಾಖಲೆ ತರದೇ ಬರಿಗೈಲಿ ಬಂದಿದ್ದೀರಾ?’ ನಾನೇನು ಕಿವಿ ಮೇಲೆ ದಾಸವಾಳ ಹೂವು ಇಟ್ಟುಕೊಂಡಿದ್ದೀನಾ? ಇದು ಯಾವ ಜಾದು? ಲಕ್ಷಾಂತರ ಬೀದಿ ನಾಯಿಗಳ ಸಂತಾನಹರಣ ಮಾಡಿದ್ದೇವೆ ಎನ್ನುತ್ತೀರಿ, ಆದರೆ ಅವುಗಳ ಸಂಖ್ಯೆ ಮಾತ್ರ ಹಾಗೆಯೇ ಇದೆ. ಜನರು ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ನೀವು ಜನರನ್ನು ಮೂರ್ಖರನ್ನಾಗಿಸುತ್ತಿದ್ದೀರಾ? ಯಾವುದೇ


ಉದಯವಾಹಿನಿ ಚಿತ್ರ

ಅಂಕಿಅಂಶಗಳಿಲ್ಲದೆ ಸಭೆಗೆ ಹೇಗೆ ಬರುತ್ತೀರಿ? ಇವರನ್ನು ತಕ್ಷಣ ಕರ್ತವ್ಯದಿಂದ ಬಿಡುಗಡೆ ಮಾಡಿ, ಎಂದು ಪಶುಸಂಗೋಪನಾ ಇಲಾಖೆಯ ಅಧಿಕಾರಿಗೆ ಖಡಕ್ ಎಚ್ಚರಿಕೆ ನೀಡಿದರು.

### ಸಚಿವ ಕೃಷ್ಣ ಭೈರೇಗೌಡ ಆಕ್ರೋಶ

ನಾಯಿಗಳ ಸಂತಾನಹರಣದಲ್ಲಿ ಜಿಬಿಎ ಅಧಿಕಾರಿಗಳ ಕಳ್ಳಾಟ ಇದೆ. ಕಳೆದ 8 ವರ್ಷಗಳ ಅವಧಿಯಲ್ಲಿ 3 ಲಕ್ಷ ನಾಯಿಗಳಿಗೆ ಸಂತಾನಹರಣ ಮಾಡಿದ್ದಾರೆ, ಅದಕ್ಕಾಗಿ 120 ಕೋಟಿ ರೂಪಾಯಿ ಖರ್ಚಾಗಿದೆ. ಆದರೆ ನಾಯಿಗಳ ಸಂಖ್ಯೆ ಮಾತ್ರ ಕಡಿಮೆ ಆಗಿಲ್ಲ. ಹಾಗಾದರೆ ಹಣ ಎಲ್ಲಿ ಹೋಯ್ತು, ಸಂತಾನ ಹರಣ ಯಾರಿಗೆ ಮಾಡಿದ್ರು ಅನ್ನೋ ಸಂಶಯ ಇದೆ ಅಂತಾ ಸಚಿವ ಕೃಷ್ಣ ಭೈರೇಗೌಡ ಆಕ್ರೋಶ ವ್ಯಕ್ತಪಡಿಸಿದರು.

## ಅಪ್ರಾಪ್ತರನ್ನು ಬಂಧಿಸಿ, ವಿಕೃತ ಲೈಂಗಿಕ ಕ್ರಿಯೆಗೆ ಒತ್ತಾಯ; ಅಮೃತಹಳ್ಳಿ ಪಿಎಸ್ ಐ ಬಂಧನ

• ಉದಯವಾಹಿನಿ, ಬೆಂಗಳೂರು

ವಿಚಾರಣೆಯ ನೆಪದಲ್ಲಿ ಅಪ್ರಾಪ್ತ ವಯಸ್ಕರ ಮೇಲೆ ಹಲ್ಲೆ ನಡೆಸಿ ಅಶ್ಲೀಲ ಕೃತ್ಯಗಳಿಗೆ ಒತ್ತಾಯಿಸಿದ ಆರೋಪದ ಮೇಲೆ ಅಮೃತಹಳ್ಳಿ ಪೊಲೀಸ್ ಠಾಣೆಗೆ ಸೇರಿದ ಪೊಲೀಸ್ ಸಬ್–ಇನ್ಸ್‌ಪೆಕ್ಟರ್ ಒಬ್ಬರನ್ನು ಬಂಧಿಸಲಾಗಿದೆ.

ಒಂದು ವರ್ಷದ ಹಿಂದೆ ಕೊಲೆ ಪ್ರಕರಣವೊಂದರಲ್ಲಿ ಪಿಎಸ್‌ಐ ಆರೋಪಿಗಳನ್ನು ಬಂಧಿಸಿದ್ದರು, ಆದರೆ ದೌರ್ಜನ್ಯದ ವೀಡಿಯೊ ವೈರಲ್ ಆದ ನಂತರವೇ ಈ ವಿಷಯ ಬೆಳಕಿಗೆ ಬಂದಿದೆ.

ಆರೋಪಿ ಪಿಎಸ್‌ಐ ಪ್ರವೀಣ್, ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗಾಗಿ ಅಪ್ರಾಪ್ತ ವಯಸ್ಕರನ್ನು ಲಾಡ್ಜ್‌ಗೆ ಕರೆತಂದಿದ್ದರು, ಅಲ್ಲಿ ಅವರಿಗೆ ಬೆಲ್ಟ್‌ನಿಂದ ಹೊಡೆದಿದ್ದಾರೆ, ಅಶ್ಲೀಲ ಭಾಷೆಯನ್ನು ಬಳಸಿ, ವಿಕೃತ ಲೈಂಗಿಕ ಕ್ರಿಯೆಗಳಿಗೆ ಒತ್ತಾಯಿಸಿದ್ದಾರೆ ಎಂದು


ಉದಯವಾಹಿನಿ ಚಿತ್ರ

ಮೂಲಗಳು ತಿಳಿಸಿವೆ. ಪ್ರವೀಣ್ ಘಟನೆಯನ್ನು ತನ್ನ ಫೋನ್‌ನಲ್ಲಿ ರೆಕಾರ್ಡ್ ಮಾಡಿದ್ದಾನೆ ಎಂದು ಮೂಲಗಳು ತಿಳಿಸಿವೆ. ನಂತರ ವೀಡಿಯೊಗಳು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿವೆ. ಇದರ ನಂತರ, ಅಮೃತಹಳ್ಳಿ ಪೊಲೀಸರು ಪ್ರವೀಣ್ ಮತ್ತು ಇತರರ ವಿರುದ್ಧ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆ ಮತ್ತು ಬಾಲ ನ್ಯಾಯ ಕಾಯ್ದೆಯಡಿಯಲ್ಲಿ ಸ್ವಯಂಪ್ರೇರಿತ ಪ್ರಕರಣವನ್ನು ದಾಖಲಿಸಿದ್ದಾರೆ.

ನಂತರ ತನಿಖೆಯನ್ನು ಕೊತ್ತನೂರು ಪೊಲೀಸ್ ಠಾಣೆಗೆ ವರ್ಗಾಯಿಸಲಾಯಿತು.

ಪ್ರವೀಣ್‌ನನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ದೃಢಪಡಿಸಿದ್ದಾರೆ, ನ್ಯಾಯಾಲಯವು ಅವನನ್ನು ಪೊಲೀಸ್ ಕಸ್ಟಡಿಗೆ ನೀಡಿದೆ. ಕೃತ್ಯಕ್ಕೆ ಸಹಾಯ ಮಾಡಿದ ಆರೋಪದ ಮೇಲೆ ಕಾನ್‌ಸ್ಟೆಬಲ್ ರಾಘವೇಂದ್ರ ಅವರನ್ನು ಸಹ ಅಮಾನತುಗೊಳಿಸಲಾಗಿದೆ.

## ದೇವರ ಹೆಸರಿನಲ್ಲಿ ಮೋದಿ ಸರ್ಕಾರ ಜನರ ನಂಬಿಕೆಗೆ ದ್ರೋಹ ಮಾಡಿದೆ

• ಉದಯವಾಹಿನಿ, ಬೆಂಗಳೂರು

ರಾಮ ಮಂದಿರ ದೇಣಿಗೆ ವಿಚಾರದಲ್ಲಿ ಆಗಿರುವ ಹಗರಣ ಸಂಬಂಧ ಮಾಧ್ಯಮಗಳು ಕೇಂದ್ರ ಸರ್ಕಾರವನ್ನು ಪ್ರಶ್ನೆ ಮಾಡದೆ ವಿರೋಧ ಪಕ್ಷವನ್ನು ಮಾತ್ರ ಪ್ರಶ್ನಿಸುತ್ತಿದೆ ಏಕೆ, ಕೇಂದ್ರ ಸರ್ಕಾರದ ಪ್ರತಿನಿಧಿಗಳು ಏಕೆ ಮೌನವಾಗಿದ್ದಾರೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕೇಳಿದ್ದಾರೆ. ಇಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಾನು ತಿನ್ನುವುದಿಲ್ಲ, ಬೇರೆಯವರನ್ನು ತಿನ್ನಲು ಬಿಡುವುದಿಲ್ಲ ಎಂದು ಹೇಳುತ್ತಿರುವ ಪ್ರಧಾನಿ ಮೋದಿಯವರು ಈಗ ರಾಮದೇವರ ಹೆಸರಿನಲ್ಲಿ ನಡೆದ ಭ್ರಷ್ಟಾಚಾರ ಹಗರಣಕ್ಕೆ ಏನು ಉತ್ತರ ಕೊಡುತ್ತಾರೆ ಎಂದು ಕೇಳಿದರು. ದೇವರ ಹೆಸರಿನಲ್ಲಿ ಭ್ರಷ್ಟಾಚಾರ ಎಸಗಿ ಜನರ ನಂಬಿಕೆಗೆ ದ್ರೋಹ ಮಾಡಿದೆ ಕೇಂದ್ರ ಸರ್ಕಾರ ಇದರ ಬಗ್ಗೆ ’ಮನ್ ಕಿ ಬಾತ್’ ಯಾಕಿಲ್ಲ? ರಾಮ ಮಂದಿರ ಉದ್ಘಾಟನೆ ಮಾಡಿದ ಬಿಜೆಪಿಯವರು ಇದಕ್ಕೆ ಉತ್ತರ ಕೊಡಬೇಕು ಎಂದರು.

# ಎಸ್‌ಐಆರ್ ಆರಂಭ: ಫಾರ್ಮ್ ವಿತರಣೆಯಲ್ಲಿ ತಾರತಮ್ಯ ಸಾಧ್ಯತೆ

## ಜಾಗೃತವಾಗಿರುವಂತೆ ಬಿಜೆಪಿಗರಿಗೆ ಮಾಜಿ ಸಿಎಂ ಬೊಮ್ಮಾಯಿ ವಿನಂತಿ

• ಉದಯವಾಹಿನಿ, ಬೆಂಗಳೂರು

ಇಂದು ಕೇಂದ್ರ ಚುನಾವಣಾ ಆಯೋಗ ಎಸ್‌ಐಆರ್ ಆರಂಭಿಸಿದ್ದು, ಮೊದಲನೇ ಹಂತದಲ್ಲಿ ಬಿಎಲ್ ಒಗಳು ಮನೆ ಮನೆಗೆ ಬಂದು ಫಾರ್ಮ್ 6 ವಿತರಣೆ ಮಾಡುವ ಕಾರ್ಯಕ್ರಮ ಆರಂಭವಾಗಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಫಾರ್ಮ್ ವಿತರಣೆಯಲ್ಲಿಯೇ ತಾರತಮ್ಯ ಮಾಡಿ ಬಿಜೆಪಿಯ ಬೆಂಬಲಿಗರಿಗೆ ವಿತರಣೆಯಾಗದಂತೆ ನೋಡಿಕೊಳ್ಳುವ ಸಾಧ್ಯತೆಗಳಿವೆ. ಆದ್ದರಿಂದ ನಮ್ಮ ಪಕ್ಷದ ಎಲ್ಲಾ –2ಗಳು ಅತ್ಯಂತ ಜಾಗೃತವಾಗಿ ತಮ್ಮ ಕರ್ತವ್ಯ ನಿರ್ವಹಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಿನಂತಿ ಮಾಡಿಕೊಂಡಿದ್ದಾರೆ.

ಈ ಕುರಿತು ಎಕ್ಸ್ ಪೋಸ್ಟ್ ಮಾಡಿರುವ ಅವರು, ನಾನು ನಮ್ಮ ಪಕ್ಷದ ಎಲ್ಲಾ ಬಿಎಲ್‌ಎ 2 ಗಳಿಗೆ ವಿನಂತಿಸಿಕೊಳ್ಳುವುದೇನೆಂದರೆ ಬಿಎಲ್‌ಒಗಳ ಜೊತೆಗೆ ಪ್ರತಿ ಬೂತ್‌ನಲ್ಲಿ ನಮ್ಮ ಬಿಎಲ್‌ಎ 2 ಗಳು ಪಾರ್ಮ್ ನಂಬರ್ 6 ವಿತರಣೆಯಾಗುವಂತೆ ನೊಡಿಕೊಳ್ಳಬೇಕು ಮತ್ತು ಅವುಗಳನ್ನು ಸರಿಯಾದ ರೀತಿ ಭರ್ತಿ ಮಾಡುವಂತೆ ನೋಡಿಕೊಳ್ಳಬೇಕು ಎಂದು ಕೋರಿದ್ದಾರೆ. ಮೊದಲನೇ ಹಂತದ ಈ ಕಾರ್ಯಕ್ರಮ ನಡೆಸುತ್ತಿರುವುದು ರಾಜ್ಯ ಸರ್ಕಾರದ ಅಧಿಕಾರಿಗಳು. ರಾಜ್ಯದ ಸಿಎಂ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯ ನಿರಂತರವಾಗಿ ಹೇಳಿಕೆ ಕೊಡುತ್ತಿರುವುದು ನೋಡಿದಾಗ ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಒತ್ತಡ ಹಾಕುತ್ತಿದ್ದಾರೆ. ಫಾರ್ಮ್ ವಿತರಣೆಯಲ್ಲಿಯೇ ತಾರತಮ್ಯ ಮಾಡಿ ಬಿಜೆಪಿಯ ಬೆಂಬಲಿಗರಿಗೆ ವಿತರಣೆಯಾಗದಂತೆ ನೋಡಿಕೊಳ್ಳುವ ಸಾಧ್ಯತೆಗಳಿವೆ. ಆದ್ದರಿಂದ ನಮ್ಮ ಬಿಎಲ್‌ಎ 2 ಗಳು ಅತ್ಯಂತ ಜಾಗೃತವಾಗಿ ತಮ್ಮ ಕರ್ತವ್ಯ ನಿರ್ವಹಿಸಬೇಕು.


ಉದಯವಾಹಿನಿ ಚಿತ್ರ

ಅಲ್ಲದೇ ಫಾರ್ಮ್ ನಂಬರ್ 6 ಹಂಚುವಿಕೆ, ಅರ್ಹ ಮತದಾರರ ಹೆಸರು ಬಿಟ್ಟು ಹೋಗದಂತೆ ನೋಡಿಕೊಳ್ಳುವುದು, ಅನರ್ಹ ಮತದಾರರ ಹೆಸರು ಸೇರಿಸದಂತೆ ನೋಡುವುದು ಮುಂದಿನ ಎಲ್ಲಾ ಕಾರ್ಯಗಳಲ್ಲಿ ಸಕ್ರಿಯವಾಗಿ ಭಾಗವಹಿಸಲು ವಿನಂತಿಸಿಕೊಂಡಿದ್ದಾರೆ.

**ಬಾಯಿ ಚಪಲಕ್ಕೆ ಕಾಂಗ್ರೆಸ್ಸಿಗರಿಂದ ಎಸ್‌ಐಆರ್‌ಗೆ ವಿರೋಧ – ಜನಾರ್ದನ ರೆಡ್ಡಿ:** ಕರ್ನಾಟಕದಲ್ಲಿ ರಾಜಕೀಯವಾಗಿ ವಿಪಕ್ಷದವರು ತಮ್ಮ ಬಾಯಿ ಚಪಲಕ್ಕೆ ಈ ಎಸ್‌ಐಆರ್ ಪ್ರಕ್ರಿಯೆಯನ್ನು ವಿರೋಧಿಸುತ್ತಿದ್ದಾರೆ. ಜನರನ್ನು ದಿಕ್ಕು ತಪ್ಪಿಸುವ ಉದ್ದೇಶಕ್ಕೆ ವ್ಯತಿರಿಕ್ತ ಹೇಳಿಕೆ ನೀಡುತ್ತಿದ್ದಾರೆ ಎಂದು ಶಾಸಕ ಜಿ. ಜನಾರ್ದನ ರೆಡ್ಡಿ ಆರೋಪಿಸಿದ್ದಾರೆ. ಗಂಗಾವತಿ ನಗರದ ಕನಕಗಿರಿ ರಸ್ತೆಯಲ್ಲಿರುವ ತಮ್ಮ ನಿವಾಸದಲ್ಲಿ ಸ್ವತಃ ಅರ್ಜಿ ಭರ್ತಿ ಮಾಡಿ ಅಧಿಕಾರಿಗಳಿಗೆ ನೀಡುವ ಮೂಲಕ ಗಂಗಾವತಿ ವಿಧಾನಸಭಾ ಕ್ಷೇತ್ರದಲ್ಲಿ ಮಂಗಳವಾರದಿಂದ ಆರಂಭವಾದ ಎಸ್‌ಐಆರ್ ಪ್ರಕ್ರಿಯೆಗೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಕಾಂಗ್ರೆಸಿಗರಿಗೆ ಮಾಡಲು ಬೇರೆ ಏನು ಕೆಲಸವಿಲ್ಲ.

ಬೆಳಗ್ಗೆ ಎದ್ದರೆ ಮೋದಿ ಮತ್ತು ಕೇಂದ್ರದ ಯೋಜನೆಗಳನ್ನು ಟೀಕಿಸುವುದು ಅಷ್ಟೇ ಕೆಲಸವಾಗಿದೆ. ವಾಸ್ತವದಲ್ಲಿ ಎಸ್‌ಐಆರ್ ಬಗ್ಗೆ ಬೇರೆಲ್ಲಾ ಪಕ್ಷಗಳಿಗಿಂತ ಈಕಾಂಗ್ರೆಸ್ಸಿಗರಿಗೆ ಹೆಚ್ಚು ಗೊತ್ತಿದೆ. ಸ್ವತಃ ವಿಪಕ್ಷದವರಿಗೂ ಗೊತ್ತು ದೇಶದ ಸುರಕ್ಷತೆಗಾಗಿ ಈ ಎಸ್ ಐಆರ್ ಅಗತ್ಯ ಎಂದು ಮನಸಾಕ್ಷಿಯಾಗಿ ಒಪ್ಪಿಕೊಂಡಿದ್ದಾರೆ. ಎಸ್‌ಐಆರ್ ಎಷ್ಟು ಪ್ರಾಮುಖ್ಯತೆ ಪಡೆದುಕೊಂಡಿದೆ ಎಂದರೆ ಸ್ವತಃ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಎಸ್‌ಐಆರ್‌ನಲ್ಲಿ ನೋಂದಾಯಿತ ಫಲಾನುಭವಿಗಳಿಗೆ ಮಾತ್ರ ಗ್ಯಾರಂಟಿ ಯೋಜನೆ ನೀಡಲಾಗುವುದು ಎಂದು ಹೇಳುತ್ತಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಈ ಎಸ್‌ಐಆರ್ ಪ್ರಕ್ರಿಯೆಗೆ ತೀವ್ರ ವಿರೋಧ ವ್ಯಕ್ತಪಡಿಸಿದ ಬಳಿಕ ಸುಪ್ರೀಂಕೋರ್ಟ್ ಮಧ್ಯ ಪ್ರವೇಶಿಸಿ ಈ ಪ್ರಕ್ರಿಯೆ ಸುಲಭವಾಗಿ ನಡೆಯಲು ಸಹಕಾರವಾಗುವಂತೆ ಜಿಲ್ಲಾ ಹಂತದ ನ್ಯಾಯಾಧೀಶರನ್ನು ನೇಮಕ ಮಾಡಿತ್ತು ಎಂದರು.

### ರಕ್ಷಣೆ, ಭದ್ರತೆಗಾಗಿ ಎಸ್‌ಐಆರ್

ದೇಶದಲ್ಲಿರುವ ಪ್ರತಿಯೊಬ್ಬ ಮತದಾರರ ರಕ್ಷಣೆ ಮತ್ತು ದೇಶದ ಆಂತರಿಕ ಭದ್ರತೆಗಾಗಿ ಚುನಾವಣಾ ಆಯೋಗ ಇಡೀ ದೇಶಾದ್ಯಂತ ಎಸ್‌ಐಆರ್ ಕೈಗೊಂಡಿದೆ. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಮತದಾನದ ಹಕ್ಕು ದುರುಪಯೋಗ ತಡೆಗಟ್ಟುವ ನಿಟ್ಟಿನಲ್ಲಿ ಒಬ್ಬೊಬ್ಬ ವ್ಯಕ್ತಿ ಎರಡು ಮೂರು ಕಡೆಗಳಲ್ಲಿ ಮತದಾನದ ಹಕ್ಕು ಹೊಂದಿರುವುದು, ನಕಲಿಯಾಗಿ ಒಂದಕ್ಕಿಂತ ಹೆಚ್ಚು ಕಡೆ ಮತದಾನ ಹೊಂದಿರುವುದನ್ನು ಪತ್ತೆ ಹಚ್ಚುವ ಉದ್ದೇಶಕ್ಕೆ ಚುನಾವಣಾ ಆಯೋಗ ಎಸ್‌ಐಆರ್ ಎಂಬ ಪ್ರಕ್ರಿಯೆಗೆ ಚಾಲನೆ ನೀಡಿದೆ.

# ಬಡಗಲಪುರ ನಾಗೇಂದ್ರ ಬಣದಿಂದ ಹೊರಬಂದ ರೈತ ಮುಖಂಡರು

• ಉದಯವಾಹಿನಿ, ಗುಂಡ್ಲುಪೇಟೆ

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಬಡಗಲಪುರ ನಾಗೇಂದ್ರ ಬಣದಿಂದ ಸಂಪೂರ್ಣವಾಗಿ ಹೊರಗುಳಿಯುವ ನಿರ್ಧಾರ ಕೈಗೊಂಡಿರುವುದಾಗಿ ರೈತ ಮುಖಂಡ ಹಂಗಳ ದಿಲೀಪ್ ತಿಳಿಸಿದರು. ಮಂಗಳವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ,ಗುಂಡ್ಲುಪೇಟೆ ಸೇರಿದಂತೆ ಜಿಲ್ಲೆಯ ನಾಲ್ಕು ತಾಲ್ಲೂಕಿನ 25 ಗ್ರಾಮ ಘಟಕಗಳ ರೈತ ಮುಖಂಡರು ಬಡಗಲಪುರ ನಾಗೇಂದ್ರ ಬಣದ ಕಾರ್ಯವೈಖರಿ ಮತ್ತು ಸಿದ್ಧಾಂತಗಳಿಂದ ಅಸಮಾಧಾನಗೊಂಡು ಹೊರಬಂದಿದ್ದಾರೆ ಹಾಗಾಗಿ ರೈತಪರ ಮೂಲ ಸಿದ್ಧಾಂತಗಳನ್ನು ಉಳಿಸಿಕೊಂಡು ಎಲ್ಲರನ್ನು ಒಗ್ಗೂಡಿಸಿ ಹೊಸ ರೈತ ಸಂಘಟನೆಯನ್ನು ನಿರ್ಮಿಸಿ ರೈತರ ಪರ ಹೋರಾಟ ಮುಂದುವರಿಸಲಾಗುವುದು ಎಂದು ಹೇಳಿದರು. ಸರ್ಕಾರದ ರೈತ ವಿರೋಧಿ ನೀತಿಗಳನ್ನು ಖಂಡಿಸುವುದು ಹಾಗೂ ರೈತರ


ಉದಯವಾಹಿನಿ ಚಿತ್ರ

ಹಿತಾಸಕ್ತಿಗಾಗಿ ನಿರಂತರ ಹೋರಾಟ ನಡೆಸುವುದು ಹೊಸ ಸಂಘಟನೆಯ ಪ್ರಮುಖ ಉದ್ದೇಶವಾಗಿದೆ. ಪ್ರೊ. ನಂಜುಂಡಸ್ವಾಮಿ ಅವರ ರೈತಪರ ಸಿದ್ಧಾಂತಗಳನ್ನು ಮುಂದುವರಿಸಿಕೊಂಡು ಹೋಗಲಿದ್ದು ಪ್ರಸ್ತುತ ರೈತ ಸಂಘದ ಚಿಹ್ನೆಯಿರುವ ಶಾಲನ್ನು ತಿರಸ್ಕರಿಸಿ ಸಂಘದ ಮೂಲ ಸಿದ್ಧಾಂತಗಳ ಸಂಕೇತವಾದ ಸಾದಾ ಹಸಿರು ಶಾಲನ್ನು ಧರಿಸುವ ಮೂಲಕ ನಮ್ಮ ನಿಲುವು ವ್ಯಕ್ತಪಡಿಸುತ್ತಿದ್ದೇವೆ ಎಂದು ತಿಳಿಸಿದರು. ಗುಂಡ್ಲುಪೇಟೆಯಲ್ಲಿ ಪ್ರೊ. ನಂಜುಂಡಸ್ವಾಮಿ ಅವರ ಜಯಂತಿ ಆಚರಿಸಲು ತೀರ್ಮಾನಿಸಿದ್ದರೂ ಬಡಗಲಪುರ ನಾಗೇಂದ್ರ ಅವರು ಅದಕ್ಕೆ ವಿರೋಧ ವ್ಯಕ್ತಪಡಿಸಿದರು. ಅಲ್ಲದೆ ಲೋಕಸಭಾ ಚುನಾವಣೆಯಲ್ಲಿ ಸಂದರ್ಭದಲ್ಲಿ ಒಂದು ಪಕ್ಷದ ಪರ ಅಥವಾ ವಿರುದ್ಧ ಮತ ಚಲಾಯಿಸುವಂತೆ ಸೂಚನೆ ನೀಡಿರುವುದು ರೈತ ಸಂಘಟನೆಯ ಮೂಲ ಉದ್ದೇಶವಲ್ಲ ಎಂದು ಆರೋಪಿಸಿದರು.ರಾಜ್ಯದ ಯಾವುದೇ ರಾಜಕೀಯ ಪಕ್ಷದ ಪರ ಅಥವಾ ವಿರುದ್ಧ ನಿಲುವು ವ್ಯಕ್ತಪಡಿಸುವುದು ರೈತ ಸಂಘದ ಕೆಲಸವಲ್ಲ. ಹಲವು ವರ್ಷಗಳಿಂದ ಸಂಘಕ್ಕಾಗಿ ದುಡಿದ ಕಾರ್ಯಕರ್ತರನ್ನು ಕೆಲವರು ತಮ್ಮ ವೈಯಕ್ತಿಕ ವರ್ಚಸ್ಸಿಗೆ ಬಳಸಿಕೊಳ್ಳುತ್ತಿರುವ ಭಾವನೆ ಮೂಡಿದ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಂಡಿದ್ದೇವೆ ಎಂದು ಹೇಳಿದರು. ಬೊಮ್ಮನಹಳ್ಳಿ ಲೋಕೇಶ್ ಮಾತನಾಡಿ ಕಳೆದ 15 ವರ್ಷಗಳಿಂದ ರೈತ ಸಂಘದಲ್ಲಿ ಕಾರ್ಯನಿರ್ವಹಿಸಿದ್ದೇವೆ ಆದರೆ ಸಂಘಟನೆಯೊಳಗಿನ ಬಣ ರಾಜಕೀಯ ಹಾಗೂ ಸಣ್ಣ-ಪುಟ್ಟ ಭಿನ್ನಾಭಿಪ್ರಾಯಗಳಿಂದ ರೈತಪರ ಹೋರಾಟ ದುರ್ಬಲವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯ 25 ಗ್ರಾಮ ಘಟಕಗಳ ರೈತರು ಸಂಘದಿಂದ ಹೊರಬರುವ ನಿರ್ಧಾರ ಕೈಗೊಂಡಿದ್ದಾರೆ ಎಂದು ಹೇಳಿದರು.

ರೈತಪರ ಹೋರಾಟ ಮತ್ತಷ್ಟು ಬಲಿಷ್ಠವಾಗಬೇಕಾದರೆ ಎಲ್ಲಾ ರೈತ ಸಂಘಟನೆಗಳು ಒಂದೇ ವೇದಿಕೆಯಡಿ ಬರಬೇಕು. ಹಿರಿಯ ರೈತ ಮುಖಂಡರು, ನ್ಯಾಯಾಧೀಶರು ಹಾಗೂ ಸಮಾಜದ ವಿವಿಧ ವರ್ಗಗಳ ಸಹಕಾರದೊಂದಿಗೆ ತಾಲ್ಲೂಕು ಅಧ್ಯಕ್ಷ ಹಂಗಳ ದಿಲೀಪ್ ಅವರ ನೇತೃತ್ವದಲ್ಲಿ ಹೊಸ ರೈತ ಸಂಘಟನೆಯನ್ನು ಕಟ್ಟಲಾಗುವುದು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾಧು, ಕುಮಾರ್ (ಭೀಮನಬೀಡು), ಶಿವಮಲ್ಲು (ಹೊನ್ನೇಗೌಡನಹಳ್ಳಿ), ಪುತ್ತನಪುರ ಮಹದೇವಪ್ಪ, ಮಹದೇವಶೆಟ್ಟಿ (ನಿಟ್ರೆ), ಮೈದಿನ್, ರೇವಣ್ಣ (ಹಿರೀಕಾಟಿ), ನಾಗರಾಜು, ಸಂತೋಷ, ಮಹದೇವಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

‘ಮೈಕ್ರೋ ಲೆವೆಲ್ ಕ್ರಿಯಾ ಯೋಜನೆ ಸಿದ್ಧಪಡಿಸಿ

# ಜೈವಿಕ ರಸಗೊಬ್ಬರಕ್ಕೆ ಒತ್ತು ನೀಡಲು ಡಿಸಿ ಸೂಚನೆ

## ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ‘ನೀರಿನ ಅದಾಲತ್ ಸಭೆಗಳನ್ನು ಆಯೋಜಿಸಲಾಗುತ್ತಿದೆ

• ಉದಯವಾಹಿನಿ, ಕೋಲಾರ

ಕೋಲಾರ, -ಕೃಷಿಯಲ್ಲಿ ರಸಗೊಬ್ಬರಗಳ ಅತಿಯಾದ ಬಳಕೆ ಮಣ್ಣಿನ ಫಲವತ್ತತೆ ಮತ್ತು ಪರಿಸರದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಆದ್ದರಿಂದ ರೈತರು ರಾಸಾಯನಿಕ ರಸಗೊಬ್ಬರದ ಮೇಲಿನ ಅವಲಂಬನೆಯನ್ನು ತಕ್ಷಣದಿಂದಲೇ ಕಡಿಮೆ ಮಾಡಿ, ಜೈವಿಕ ಗೊಬ್ಬರಗಳ ಬಳಕೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ನಡೆದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಜಿಲ್ಲೆಯ ನೀರಿನ ಲಭ್ಯತೆ, ಅಂತರ್ಜಲ ಮಟ್ಟ ಮತ್ತು ಮುಂಬರುವ ದಿನಗಳ ನೀರಿನ ಬೇಡಿಕೆಯನ್ನು ಪರಿಗಣಿಸಿ ರೂಪಿಸಲಾದ ಕ್ರಿಯಾ ಯೋಜನೆಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಅಧಿಕಾರಿಗಳಿಗೆ ಸೂಚಿಸಿದರು. 2025ರ ಜನವರಿಯಿಂದ ನವೆಂಬರ್ ವರೆಗೆ ಜಿಲ್ಲೆಯಲ್ಲಿ 735.1 ಮಿ.ಮೀ. ವಾಡಿಕೆ ಮಳೆಯಾಗಬೇಕಾಗಿದ್ದು, 927.0 ಮಿ.ಮೀ. ನಷ್ಟು ಹೆಚ್ಚುವರಿ ಮಳೆಯಾಗಿದೆ (ಶೇ.26ರಷ್ಟು ಹೆಚ್ಚಳ). ಪ್ರಸ್ತುತ 2026ರ ಜೂನ್ ತಿಂಗಳಲ್ಲಿ ವಾಡಿಕೆಗಿಂತ ಶೇ. 3ರಷ್ಟು ಹೆಚ್ಚು ಮಳೆ ದಾಖಲಾಗಿದೆ. ಜಿಲ್ಲೆಯಲ್ಲಿ ಸುಮಾರು 29 ವಾರಗಳಿಗೆ ಸಾಕಾಗುವಷ್ಟು 3,09,165 ಟನ್‌ಗಳಷ್ಟು ಮೇವು ದಾಸ್ತಾನು ಇದೆ. ಜಾನುವಾರುಗಳಿಗೆ



ಉದಯವಾಹಿನಿ ಚಿತ್ರ

ನೀರಿನ ತೊಟ್ಟಿಗಳ ಮೂಲಕ ಕುಡಿಯುವ ನೀರಿನ ವ್ಯವಸ್ಥೆಯನ್ನು ಪಂಚಾಯತ್ ಮಟ್ಟದಲ್ಲಿ ಕಲ್ಪಿಸಲಾಗುತ್ತಿದೆ. ಕೆ.ಸಿ.ವ್ಯಾಲಿ ಮತ್ತು ಯರಗೋಳ ಯೋಜನೆಯಡಿ ಒಟ್ಟು 132 ಕೆರೆಗಳಿಗೆ ನೀರು ಹರಿಸಲಾಗುತ್ತಿದ್ದು, ಸಣ್ಣ ನೀರಾವರಿ, ಜಿಲ್ಲಾ ಪಂಚಾಯತ್ ಹಾಗೂ ಕಂದಾಯ ಇಲಾಖೆಯ ವ್ಯಾಪ್ತಿಯ ಕೆರೆಗಳಲ್ಲಿನ ನೀರಿನ ಮಟ್ಟವನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಬೇಕು ಎಂದರು. ಕುಡಿಯುವ ನೀರಿನ ಅಸಮರ್ಪಕ ಹಂಚಿಕೆಯನ್ನು ಸರಿಪಡಿಸಲು ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ‘ನೀರಿನ ಅದಾಲತ್ ಸಭೆಗಳನ್ನು ಆಯೋಜಿಸಲಾಗುತ್ತಿದೆ. ಅಲ್ಲದೆ, ನೀರಿನ ಬಳಕೆ ಮತ್ತು ಲಭ್ಯತೆಯನ್ನು ಅಳೆಯಲು 195 ನಗರ ವಾರ್ಡ್‌ಗಳು ಹಾಗೂ 1531 ಗ್ರಾಮಗಳಲ್ಲಿ ’ನೀರಿನ ಆಡಿಟ್ ನಡೆಸಲಾಗಿದೆ.

> ಮುಂಬರುವ ದಿನಗಳಲ್ಲಿ ನೀರಿನ ಕೊರತೆ ಉಂಟಾಗಬಹುದಾದ 130 ಗ್ರಾಮೀಣ ಗ್ರಾಮಗಳು ಮತ್ತು 49 ನಗರ ವಾರ್ಡ್‌ಗಳನ್ನು ಗುರುತಿಸಲಾಗಿದ್ದು, ಇವುಗಳಿಗಾಗಿ ‘ಮೈಕ್ರೋ ಲೆವೆಲ್ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿಕೊಳ್ಳಬೇಕು.
> ಅಗತ್ಯವಿದ್ದಲ್ಲಿ ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆ ಆಧಾರದಲ್ಲಿ ಪಡೆಯಲು ಮತ್ತು ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಟೆಂಡರ್ ಪ್ರಕ್ರಿಯೆ ಚುರುಕುಗೊಳಿಸಲು ಸೂಚಿಸಿದರು. -ಜಿಲ್ಲಾಧಿಕಾರಿಗಳು

**ಅಧಿಕಾರಿಗಳಿಗೆ ಸೂಚನೆ**

ಜಿಲ್ಲಾಧಿಕಾರಿಗಳು ಮತ್ತು ತಹಸೀಲ್ದಾರ್‌ಗಳ ಪಿ.ಡಿ ಖಾತೆಯಲ್ಲಿ ಈ ಮತ್ತು ಈ ಅಡಿಯಲ್ಲಿ ಒಟ್ಟು ರೂ. 1236.44 ಲಕ್ಷಗಳ ಅನುದಾನ ಲಭ್ಯವಿದ್ದು, ಕುಡಿಯುವ ನೀರು ಮತ್ತು ವಿಪತ್ತು ನಿರ್ವಹಣೆಯ ತುರ್ತು ಕೆಲಸಗಳಿಗೆ ಬಳಸಿಕೊಳ್ಳಲು ಸೂಚಿಸಲಾಗಿದೆ. ನೀರಿನ ನಿರ್ವಹಣೆಯಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಲು ಮತ್ತು ಸಾರ್ವಜನಿಕರ ದೂರುಗಳಿಗೆ ತಕ್ಷಣ ಸ್ಪಂದಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಗೃಹಲಕ್ಷ್ಮಿ ಹಣ ನಿಲ್ಲುವುದಿಲ್ಲ; ಮತ್ತೆ ಅರ್ಜಿ ಹಾಕುವ ಬಗ್ಗೆ ಯಾವುದೇ ಅದೇಶ ಬಂದಿಲ್ಲ: ಹೊಂಗನೂರು ಚಂದ್ರು

• ಉದಯವಾಹಿನಿ, ಚಾಮರಾಜನಗರ

ಕುಟುಂಬದ ಯಜಮಾನಿಗೆ ರಾಜ್ಯ ಸರ್ಕಾರ ನೀಡುತ್ತಿರುವ ಗೃಹಲಕ್ಷ್ಮಿ ಯೋಜನೆಯ ಹಣ ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ. ಜೊತೆಗೆ ಗೃಹ ಲಕ್ಷ್ಮಿ ಹಣ ಪಡೆದುಕೊಳ್ಳಲು ಮತ್ತೆ ಅರ್ಜಿ ಸಲ್ಲಿಸುವ ಬಗ್ಗೆ ಸರ್ಕಾರದಿಂದ ಯಾವುದೇ ಅಧಿಕೃತ ಆಧೇಶ ಬಂದಿಲ್ಲ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಹೊಂಗನೂರು ಎಚ್.ವಿ. ಚಂದ್ರು ತಿಳಿಸಿದರು.



ನಗರದ ಜಿಲ್ಲಾ ಪಂಚಾಯಿತಿ ಹಳೇ ಕೆಡಿಪಿ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಕಳೆದ ಮೂರು ವರ್ಷಗಳಿಂದ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಕುಟುಂಬದ ಯಜಮಾನಿಗಳಿಗೆ ಪ್ರತಿ ಮಾಹೆ 2 ಸಾವಿರ ರೂ. ಬರುತ್ತಿದೆ.

ಈ ಯೋಜನೆಯಲ್ಲಿ ಅನರ್ಹರು ಸೇರಿಕೊಂಡು ಸರ್ಕಾರದ ಸವಲತ್ತುಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಮರಣ ಹೊಂದಿರುವವರ ಖಾತೆಗೂ ಹಣ ಜಮಾವಾಗುತ್ತಿದೆ. ಹೊರ ರಾಜ್ಯದವರು ಈ ಯೋಜನೆಯ ಫಲಾನುಭವಿಗಳಿದ್ದಾರೆ.

ಆದ್ದರಿಂದ ಈಗ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೆಲವು ಮಾರ್ಪಾಟು ಮಾಡಲು ಇಚ್ಚಿಸಿದ್ದು, ಓಟರ್ ಐಡಿ ಕಾರ್ಡು ಹೊಂದಿರುವವರಿಗೆ ಮಾತ್ರ ಈ ಸವಲತ್ತು ನೀಡುವ ಇಂಗಿತವನ್ನು ವ್ಯಕ್ತಪಡಿಸಿದ್ದರು.

# ಚಾಲಕನ ನಿಯಂತ್ರಣ ತಪ್ಪಿ ಸಾರಿಗೆ ಬಸ್ ಪಲ್ಟಿ; 4 ಕ್ಕೂ ಹೆಚ್ಚು ಮಂದಿ ಗಾಯ

• ಉದಯವಾಹಿನಿ, ಹನೂರು

ಚಾಲಕನ ನಿಯಂತ್ರಣ ತಪ್ಪಿ ಸಾರಿಗೆ ಬಸ್ ಪಲ್ಟಿಯಾದ ಪರಿಣಾಮ ಇಬ್ಬರು ಸ್ಥಳದಲ್ಲೇ ಸಾವನಪ್ಪಿ 40 ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಘಟನೆ ಹನೂರು ಕೊಳ್ಳೇಗಾಲ ಮುಖ್ಯ ರಸ್ತೆಯ ಮದುವನಹಳ್ಳಿ ಸಮೀಪದಲ್ಲಿ ನಡೆದಿದೆ. ಸ್ಥಳೀಯವ್ಯಾಪಾರ ಪ್ರಚಾರ ಮಲೆ ಮಹದೇಶ್ವರ ಬೆಟ್ಟದಿಂದ ಕೊಳ್ಳೇಗಾಲ ಮಾರ್ಗವಾಗಿ ಮೈಸೂರಿಗೆ ತೆರಳುತ್ತಿದ ಕೆ ಎ-57 ಎಫ್-3964 ಸಂಖ್ಯೆಯ ಚಾಮರಾಜನಗರ ವಿಭಾಗದ ಕರ್ನಾಟಕ ಸಾರಿಗೆ ಬಸ್ ಮದುವನಹಳ್ಳಿ ಸಮೀಪದ ಸೀಗೆಕಾಯಿ ಫ್ಯಾಕ್ಟರಿಯ



ಮುಂಭಾಗ ಸಂಜೆ 5-30 ಗಂಟೆಯ ವೇಳೆಯಲ್ಲಿ ಚಾಲಕನ ಅತೀ ವೇಗದ ಚಾಲನೆಯಿಂದ ಬಸ್ ಪಲ್ಟಿಯಾಗಿದೆ. ಈ ಘಟನೆಯಲ್ಲಿ 50 ವರ್ಷದ ಮಹೇಶ್ ಕುದೇರು, 60 ವರ್ಷದ ಪುಟ್ಟನಂಜಮ್ಮ ಕೊಳ್ಳೇಗಾಲ ಪಟ್ಟಣದ ನಿವಾಸಿ ಇಬ್ಬರು ಸ್ಥಳದಲ್ಲೇ ಸಾವನಪ್ಪಿದ್ದು 40 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಗಾಯಳುಗಳನ್ನು ಹತ್ತಿರದ ಕೊಳ್ಳೇಗಾಲ ಆಸ್ಪತ್ರೆ ಹಾಗೂ ಹೆಚ್ಚಿನ ಚಿಕಿತ್ಸೆಗಾಗಿ ಹಲವರನ್ನು ಚಾಮರಾಜನಗರ ಸಿಮ್ಸ್ ಮತ್ತು ಮೈಸೂರಿನ ಕೆ ಆರ್ ಆಸ್ಪತ್ರೆಗೆ ರವಾನಿಸಿದ್ದಾರೆ ಎಂದು ತಿಳಿದು ಬಂದಿದೆ. ಇನ್ನು ಘಟನೆ ತಿಳಿಯುತ್ತಿದ್ದಂತೆ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿದ್ದು ಚಾಮರಾಜನಗರ ಜಿಲ್ಲಾ ಎಸ್ ಪಿ ಮುತ್ತುರಾಜು ಎಂ ರವರು ಹಾಗೂ ಎ ಎಸ್ ಪಿ ಎಂ ಎನ್ ಶಶಿಧರ್ ರವರು ಸ್ಥಳಕ್ಕೆ ಆಗಮಿಸಿ ಘಟನೆ ಕುರಿತು ವಿವರಣೆ ಪಡೆದುಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.ಸಾರಿಗೆ ಇಲಾಖೆಯ ಚಾಮರಾಜನಗರ ಡಿ ಸಿ ನಾಗರಾಜ್ ರವರು ಕೂಡ ಸ್ಥಳಕ್ಕೆ ಆಗಮಿಸಿ ಮಾಹಿತಿ ಪಡೆದುಕೊಂಡು ಸಾವನ್ನಪ್ಪಿರುವ ಇಬ್ಬರು ಕುಟುಂಬದವರಿಗೆ 25 ಸಾವಿರ ರೂಗಳನ್ನು ಅಂತ್ಯ ಸಂಸ್ಕಾರ ಮಾಡಲು ನೀಡಿದ್ದು ಮೃತರ ಕುಟುಂಬಸ್ಥರಿಗೆ ಇಲಾಖೆಯಿಂದ ಪರಿಹಾರದ ಹಣ ನೀಡಲಾಗುವುದು ಗಾಯಗೊಂಡಿರುವ ಎಲ್ಲಾ ಗಾಯಳುಗಳಿಗೆ ಉತ್ತಮವಾದ ಚಿಕಿತ್ಸೆ ನೀಡುವಂತೆ ತಿಳಿಸಲಾಗಿದೆ ಎಂದು ತಿಳಿಸಿದ್ದಾರೆ.

## ಪಾವಗಡದಲ್ಲಿ ಜನಸಂಪರ್ಕ ಸಭೆ: ಸಾರ್ವಜನಿಕರ ಅಹವಾಲು ಆಲಿಸಿದ

• ಉದಯವಾಹಿನಿ, ಪಾವಗಡ

ಪಾವಗಡ, ಶಾಸಕ ಎಚ್.ವಿ. ವೆಂಕಟೇಶ್ ಅವರ ನೇತೃತ್ವದಲ್ಲಿ ಪಟ್ಟಣದ ಶಾಸಕರ ಭವನದಲ್ಲಿ ಜನಸಂಪರ್ಕ ಸಭೆ ನಡೆಯಿತು. ಸಭೆಗೆ ತಾಲ್ಲೂಕಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾರ್ವಜನಿಕರು, ತಮ್ಮ ಸಮಸ್ಯೆಗಳು ಹಾಗೂ ಅಹವಾಲುಗಳನ್ನು ನೇರವಾಗಿ ಶಾಸಕರ ಮುಂದಿಟ್ಟರು. ಸಭೆಯಲ್ಲಿ ಹೆಚ್ಚಾಗಿ ತಾಲ್ಲೂಕು ಆಡಳಿತಕ್ಕೆ ಸಂಬಂಧಿಸಿದ ಸಮಸ್ಯೆಗಳೇ ಕೇಳಿಬಂದವು.

ಕುಡಿಯುವ ನೀರು, ವಿದ್ಯುತ್, ರಸ್ತೆ ಸೇರಿದಂತೆ ವಿವಿಧ ಮೂಲಸೌಕರ್ಯಗಳ ಕುರಿತು ಸಾರ್ವಜನಿಕರು ಮನವಿ ಸಲ್ಲಿಸಿದರು.

ಅಪ್ಪಾಜಿಹಳ್ಳಿ ಗ್ರಾಮದಲ್ಲಿ ಜಲಜೀವನ್ ಮಿಷನ್ (ಎಎಂ) ಕಾಮಗಾರಿ ಸ್ಥಗಿತಗೊಂಡಿರುವುದು ಹಾಗೂ ಇಂದಿಗೂ ಕೆಲವು ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸದಿರುವ ಸಮಸ್ಯೆಯನ್ನು ಗ್ರಾಮಸ್ಥರು ಶಾಸಕರ ಗಮನಕ್ಕೆ ತಂದರು.

# ಅಗಲಕೋಟೆಯ ಭೂ ವಿವಾದ: ಸರ್ವೆ ಕಾರ್ಯ

• ಉದಯವಾಹಿನಿ, ಮಾಲೂರು

ಅಗಲಕೋಟೆಯ ಭೂ ವಿವಾದಕ್ಕೆ ಸಂಬಂಧಿಸಿದಂತೆ ತಹಶೀಲ್ದಾರ್ ಎಂ.ವಿ.ರೂಪ ನೇತೃತ್ವದಲ್ಲಿ ಪೊಲೀಸರ ಸಮ್ಮುಖದಲ್ಲಿ ಭೂಮಾಪನ ಶಾಖೆ ಅಧಿಕಾರಿಗಳು ಸರ್ವೆ ಕಾರ್ಯ ನಡೆಯಿತು,

ಸದ್ಯ ಮಾಜಿ ಶಾಸಕ ಕೆ.ಎಸ್.ಮಂಜುನಾಥ್ ಗೌಡ ಸರ್ಕಾರಿ ಗೋಮಾಳ ಹಾಗೂ ದಾನಿಗಳು ಶಿಕ್ಷಣ ಇಲಾಖೆಗೆ ನೀಡಿರುವ ಜಮೀನು ಕಬಳಿಸಿದ್ದಾರೆ.ಹೀಗಾಗಿ ತನಿಖೆ ನಡೆಸಿ ಸರ್ಕಾರದ ಸುಪರ್ದಿಗೆ ಪಡೆಯುವಂತೆ ಆರೋಪಿಸಿ ಜಿಲ್ಲಾಧಿಕಾರಿ,ಜಿಲ್ಲಾ ಉಪ ವಿಭಾಗಾಧಿಕಾರಿಗೆ ದೂರು ನೀಡಲಾಗಿತ್ತು. ಹೀಗಾಗಿ ಈ ದೂರಿನ ಹಿನ್ನಲೆಯಲ್ಲಿ ಭೂಮಾಪನ ಶಾಖೆಯವರು ಸರ್ವೆ ಕಾರ್ಯ ನಡೆಸಿದರು.


ಉದಯವಾಹಿನಿ ಚಿತ್ರ

ಇನ್ನು ತಾಲ್ಲೂಕಿನ ಟೇಕಲ್ ಹೋಬಳಿಯ ಅಗಲಕೋಟೆ ಗ್ರಾಮದ ಬಳಿ ಹಿಂದೆ ದಾನಿಗಳು ಶಿಕ್ಷಣ ಇಲಾಖೆಗೆ ಜಮೀನನ್ನು ಕೊಡುಗೆಯಾಗಿ ನೀಡಿದ್ದರು.

ಕೆಲವರು ಆ ಜಮೀನಿಗೆ ನಕಲಿ ದಾಖಲೆ ಸೃಷ್ಟಿಸಿ ಪರಬಾರೆ ಮಾಡಿದ್ದರು.

ಆ ಜಮೀನನಲ್ಲಿ ಸರ್ಕಾರಿ ಗೋಮಾಳ ರಾಜ ಕಾಲುವೆ ಕೆರೆ ನಕಾಶೆ ದಾರಿ, ಸರ್ಕಾರಿ ಶಾಲೆಯ ಇತ್ತು ಆದರೆ ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡು ಆ ಜಮೀನನ್ನು ಮಾಡಿಕೊಂಡಿದ್ದಾರೆ ಎಂದು ಮಾಜಿ ಶಾಸಕರು ಆರೋಪ ಮಾಡಿದ್ದರು.

ಇದಲ್ಲದೆ,ವಿವಾದಿತ ಅಗಲಕೋಟೆ ಜಮೀನಿನಲ್ಲಿ ಪ್ರವೇಶ ಮಾಡಿದ್ದರಿಂದ ಮಾಜಿ ಶಾಸಕ ಕೆ.ಎಸ್.ಮಂಜುನಾಥ್ ಗೌಡ ಹಾಗೂ ಬಿಜೆಪಿ ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ಇನ್ನಿತರದ ಮೇಲೆ ಮಾಸ್ತಿ ಪೊಲೀಸ್ ಠಾಣೆಯಲ್ಲಿ ಜಮೀನು ಖರಿದಿಸಿದ್ದ ಕಂಪನಿಯವರು ಹಾಗೂ ಜೆಡಿಎಸ್ ಮುಖಂಡ ಹೂಡಿ ವಿಜಯ್ ಕುಮಾರ್ ಅವರು ಮಾಸ್ತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು.

ಅಲ್ಲದೆ,ಭೂ ವಿವಾದ ತಾರಕಕ್ಕೇರಿದು ಮಾಜಿ ಶಾಸಕ ಕೆ.ಎಸ್.ಮಂಜುನಾಥ್ ಗೌಡ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಉಪ ವಿಭಾಗ ಅಧಿಕಾರಿಗಳಿಗೆ ನೀಡಿದ ದೂರಿನ ಮೇರೆಗೆ ತಾಲ್ಲೂಕು ತಹಶೀಲ್ದಾರ್ ಎಂ.ವಿ.ರೂಪ ನೇತೃತ್ವದಲ್ಲಿ ಭೂಮಾಪನ ಇಲಾಖೆ ಸಿಬ್ಬಂದಿ ಡಿವೈಎಸ್ಪಿ ವಿ.ಕೃಷ್ಣ ಪೊಲೀಸ್ ಬಂದೋಬಸ್ತಿನೊಂದಿಗೆ ಭೂಮಾಪನ ಇಲಾಖೆಯ ಅಧಿಕಾರಿಗಳು ಸರ್ವೆ ಕಾರ್ಯ ಆರಂಭಿಸಿದ್ದಾರೆ.

# ಪ್ರವಾಸಿ ನಗರದಲ್ಲಿ ಪ್ರವಾಸಿಗರನ್ನು ದಾರಿ ತಪ್ಪಿಸುವ ಕೆಲವರು; ಸಾಮಾಜಿಕ ಜಾಲತಾಣದಲ್ಲಿ ಕಹಿ ಅನುಭವ ಹಂಚಿಕೊಂಡ ಪ್ರವಾಸಿಗರು

• ಉದಯವಾಹಿನಿ, ಮೈಸೂರು

ಪ್ರವಾಸಿಗರ ನಗರಿ ಮೈಸೂರಿಗೆ ಬರುವ ಪ್ರವಾಸಿಗರನ್ನು ಇಲ್ಲಿನ ಕೆಲವು ಆಟೋ ಚಾಲಕರು ಹಾಗೂ ಕೆಲವು ವ್ಯಾಪಾರಸ್ಥರು ದಾರಿ ತಪ್ಪಿಸುವ ಕೆಲಸ ಮಾಡುತ್ತಾರೆ ಎಂದು ಕೆಲ ಪ್ರವಾಸಿಗರು ಜಾಲತಾಣಗಳಲ್ಲಿ ಕಹಿ ಅನುಭವಗಳನ್ನು ಹಂಚಿಕೊಂಡಿದ್ದಾರೆ. ಈ ಕುರಿತು ಈಟಿವಿ ಭಾರತ್ ಸ್ಥಳೀಯರನ್ನು ಮಾತನಾಡಿಸಿ ಪ್ರತ್ಯಕ್ಷ ವರದಿ ನೀಡಿದೆ. ಪ್ರವಾಸಿಗರ ನಗರಿ ಮೈಸೂರಿಗೆ ದೇಶ - ವಿದೇಶಗಳಿಂದ ಹಾಗೂ ಇತರ ಎಲ್ಲಾ ಕಡೆಗಳಿಂದ ವರ್ಷದಲ್ಲಿ 25 ರಿಂದ 30 ಲಕ್ಷ ಪ್ರವಾಸಿಗರು ಆಗಮಿಸುತ್ತಾರೆ. ಪ್ರವಾಸಿಗರು ರೈಲು, ಬಸ್ ಹಾಗೂ ಟ್ಯಾಕ್ಸಿಗಳ ಮೂಲಕ ಇಲ್ಲಿಗೆ ಬರುತ್ತಾರೆ.

ಹೀಗೆ, ಪ್ರವಾಸಿಗರು ಮೈಸೂರಿನ ಅರಮನೆ, ಮೃಗಾಲಯ, ಚಾಮುಂಡಿ ಬೆಟ್ಟ ಸೇರಿದಂತೆ ಇತರ ಪ್ರವಾಸಿತಾಣಗಳನ್ನು ನೋಡಲು ಆಟೋ ಹತ್ತಿದರೆ ಅವರು ತಮಗೆ ಬೇಕಾದ ವಸತಿಗೃಹಗಳಿಗೆ, ವ್ಯಾಪಾರಿ ಅಂಗಡಿಗಳಿಗೆ, ಹೋಟೆಲ್‌ಗಳಿಗೆ ನಯವಾಗಿ ಮಾತನಾಡಿ


ಉದಯವಾಹಿನಿ ಚಿತ್ರ

ಕರೆದುಕೊಂಡು ಹೋಗಿ, ಅಂಗಡಿಯವರಿಂದ ಕಮಿಷನ್ ಪಡೆಯುತ್ತಾರೆ. ಆ ವಸತಿ ಗೃಹ ಕಳಪೆಯಾಗಿರುತ್ತದೆ. ಈ ಬಗ್ಗೆ ಆಟೋದವರನ್ನು ಕೇಳಿದರೆ ನಮ್ಮ ಮೇಲೆ ರೇಗಾಡುತ್ತಾರೆ ಎಂದು ಹಲವಾರು ಉತ್ತರ ಭಾರತದ ಪ್ರವಾಸಿಗರು ಸಾಮಾಜಿಕ ಜಾಲತಾಣಗಳಲ್ಲಿ ಮೈಸೂರಿನ ಕಹಿ ಅನುಭವಗಳನ್ನು ಹಂಚಿಕೊಂಡಿದ್ದಾರೆ. ಇದೇ ರೀತಿ ಖಾಸಗಿ ಟ್ಯಾಕ್ಸಿಗಳು ಸಹ ಪ್ರವಾಸಿಗರನ್ನು ವಂಚಿಸುತ್ತಾರೆ ಎಂಬ ಅನುಭವವನ್ನು ಹಂಚಿಕೊಂಡಿದ್ದಾರೆ.

ರೇಷ್ಮೆ ಸೀರೆ ಹೆಸರಿನಲ್ಲಿ ವಂಚನೆ : ಮೈಸೂರಿಗೆ ಆಗಮಿಸುವ ಪ್ರವಾಸಿಗರಿಗೆ ಮೈಸೂರಿನ ರೇಷ್ಮೆ ಸೀರೆಯನ್ನು ಕೊಂಡುಕೊಳ್ಳಬೇಕು ಎಂಬ ಆಸೆ ಇರುತ್ತದೆ. ಇದಕ್ಕಾಗಿ ಇಲ್ಲಿನ ಆಟೋ ಡ್ರೈವರ್, ಅಂಗಡಿಯವರು ಸೇರಿದಂತೆ ಗೈಡ್‌ಗಳನ್ನು ಕೇಳುತ್ತಾರೆ. ಆಗ ಅವರು, ಸ್ಥಳೀಯವಾಗಿ ನಕಲಿ ರೇಷ್ಮೆ ಸೀರೆಯನ್ನೇ ನಿಜವಾದ ರೇಷ್ಮೆ ಸೀರೆಯೆಂದು ಕೊಡುತ್ತಾರೆ. ಇಲ್ಲಿಯೂ ಸಹ ಪ್ರವಾಸಿಗರಿಗೆ ಮೈಸೂರು ರೇಷ್ಮೆ ಸೀರೆ ಹೆಸರಿನಲ್ಲಿ ವಂಚನೆ ಮಾಡಲಾಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಹೆಚ್. ವಿಶ್ವನಾಥ್ ಈ ಹಿಂದೆ ಹೇಳಿಕೆ ನೀಡಿದ್ದರು.

ಮೈಸೂರಿಗೆ ಹೊರ ರಾಜ್ಯ ಹಾಗೂ ವಿದೇಶಗಳಿಂದ ಸಾವಿರಾರು ಪ್ರವಾಸಿಗರು ಬರುತ್ತಾರೆ. ಇವರು ಬಂದಾಗ ಇಲ್ಲಿನ ಕೆಲವು ಆಟೋ ಹಾಗೂ ಒಂದಿಷ್ಟು ಟ್ಯಾಕ್ಸಿಯವರು ತಪ್ಪು ಮಾಹಿತಿ ನೀಡುತ್ತಾರೆ. ಅವರು ಪ್ರವಾಸಿತಾಣ ನೋಡಬೇಕು ಎಂದ ಕಡೆ ಕರೆದುಕೊಂಡು ಹೋಗುತ್ತಾರೆ. ಅಲ್ಲಿ ಅವರು ಏನಾದರು ವಸ್ತುಗಳನ್ನು ತೆಗೆದುಕೊಳ್ಳಬೇಕು ಎಂದು ಕೇಳಿದಾಗ, ಅವರನ್ನ ತಮಗೆ ಕಮಿಷನ್ ನೀಡುವ ಹೋಟೆಲ್‌ಗಳು ಹಾಗೂ ಅಂಗಡಿಯವರ ಕಡೆ ಕರೆದುಕೊಂಡು ಹೋಗುತ್ತಾರೆ. ಈ ಸಂದರ್ಭದಲ್ಲಿ ನಕಲಿ ಸೀರೆಗಳನ್ನ ಮೈಸೂರು ಸಿಲ್ಕ್ ಸೀರೆ ಎಂದು ಮೋಸ ಮಾಡುತ್ತಾರೆ. ಇದರಿಂದ ಮೈಸೂರಿನ ಗೌರವ ಹಾಳಾಗುತ್ತಿದೆ. ಕೂಡಲೇ ಪೊಲೀಸ್ ಇಲಾಖೆ ಕ್ರಮ ವಹಿಸಬೇಕು’ ಎಂದು ಸ್ಥಳೀಯ ನಿವಾಸಿ ಬಾಲಕೃಷ್ಣ ಅವರು ಒತ್ತಾಯಿಸಿದ್ದಾರೆ.

# ಅರಣ್ಯ ಇಲಾಖೆಯಲ್ಲಿ ವ್ಯಾಪಕ ಅಕ್ರಮ ತನಿಖೆಗೆ ಆಗ್ರಹ

## ಕಲ್ಲು ಗಣಿಗಾರಿಕೆಗೆ ಸಂಬಂಧಿಸಿದಂತೆ ಇಲಾಖೆಯ ಪರವಾನಿಗೆ ಇಲ್ಲದೆ ಅಕ್ರಮವಾಗಿ ಸಾಗಾಣಿಕೆ

• ಉದಯವಾಹಿನಿ, ಕೋಲಾರ

ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಸೇರಿದಂತೆ ಇಲಾಖೆಯ ವಿವಿಧ ಅಧಿಕಾರಿಗಳು ನಡೆಸಿರುವ ಭ್ರಷ್ಟಾಚಾರ, ಸಂಬಂಧಿಕರು, ಆಪ್ತರ ಹೆಸರಿನಲ್ಲಿ ಮಾಡಿರುವ ಅಪಾರ ಆಸ್ತಿಯ ಕುರಿತು ಸಮಗ್ರ ತನಿಖೆ ನಡೆಸಬೇಕು. ಸಾರ್ವಜನಿಕರಿಗೆ ಅಗತ್ಯ ಗಿಡಗಳನ್ನು ಒದಗಿಸಬೇಕು, ಕೃಷಿ ಅರಣ್ಯ ಪ್ರೋತ್ಸಾಹಧನದ ಮೊತ್ತ ಹೆಚ್ಚಿಸ ಬೇಕು ಎಂದು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬಹುಜನ ಸಮ್ಯೈಖ್ಯ ಸಮಿತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಂಘಟನೆಯ ಮುಖಂಡರು ಮಾತನಾಡಿ ಅರಣ್ಯ ಇಲಾಖೆ ವತಿಯಿಂದ ಸಾರ್ವಜನಿಕರಿಗೆ ಉತ್ತಮವಾದ ಎತ್ತರವಾದ ಹುಣಸೆ, ತೇಗ, ಸಿಲ್ವರ್ ಓಕ್, ಲಸು, ಜಂಬುನೇರಳೆ ಮತ್ತು ಶ್ರೀಗಂಧ,ರಕ್ತಚಂದನ ಮುಂತಾದ ಸಸಿಗಳನ್ನು ಒದಗಿಸಬೇಕು. ಮತ್ತು ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆಯಡಿ ಪ್ರಸ್ತುತ ನೀಡುತ್ತಿರುವ ಪ್ರೋತ್ಸಾಹ ಧನದ ಮೊತ್ತವನ್ನು


ಉದಯವಾಹಿನಿ ಚಿತ್ರ

ಹೆಚ್ಚಿಸಬೇಕು ಎಂದು ಒತ್ತಾಯಿಸಿದರು. 1980ರ ಪೂರ್ವದಲ್ಲಿ ರೈತರಿಗೆ ಕಂದಾಯ ಇಲಾಖೆಯಿಂದ ಮಂಜೂರಾದ ರೈತರಿಗೆ ಸದರಿ ಜಮೀನುಗಳನ್ನು ನಿಯಮಾನುಸಾರ ಬಿಟ್ಟುಕೊಡಲು ಅರಣ್ಯ ಇಲಾಖೆ ತ್ವರಿತವಾಗಿ ಕ್ರಮವಹಿಸಬೇಕು ಎಂದು ಕೋರಿದರು.

> ಎಸ್ಸಿಪಿ ಮತ್ತು ಟಿಎಸ್ಪಿ ಯೋಜನೆಯಡಿಯಲ್ಲಿ ಅರಣ್ಯದ ಅಂಚಿನಲ್ಲಿರುವ ಗ್ರಾಮಗಳ ಫಲಾನುಭವಿಗಳ ಕುಟುಂಬಗಳಿಗೆ ಸಂದಾಯವಾಗ ಬೇಕಾದ ಹಣವನ್ನು ಗ್ಯಾಸ್ ಏಜನ್ಸಿಗಳ ಮೂಲಕ ಸರ್ಕಾರಕ್ಕೆ ವಂಚಿಸಿ ಹಣ ದುರುಪಯೋಗ ಬಗ್ಗೆ ಸಮಗ್ರ ತನಿಖೆಯಾಗಬೇಕೆಂದು ಒತ್ತಾಯಿಸಿದರು.
> - ಸಂರಕ್ಷಣಾಧಿಕಾರಿ ಸರೀನಾ ಸಿಕ್ಕಲಿಗಾರ್

**ಕೇಂದ್ರ ಸರ್ಕಾರದ ಯೋಜನೆ ಕಾಮಗಾರಿಗಳು ದುರುಪಯೋಗ**

ಸರೀನಾ ಸಿಕ್ಕಲಿಗಾರ್ ಮತ್ತು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಹೇಶ್ ಅವರು ಸರ್ಕಾರದ ಯೋಜನೆ ಕಾಮಗಾರಿಗಳು ಹಾಗೂ ಕೇಂದ್ರ ಸರ್ಕಾರದ ಮಾನದಂಡಗಳನ್ನು ಅಂದರೆ ನಗರ ವ್ಯಾಪ್ತಿಯಲ್ಲಿಯೇ ದುರುಪಯೋಗ ಪಡಿಸಿಕೊಂಡಿರುತ್ತಾರೆ ಎಂದು ಆರೋಪಿಸಿದರು.



## ಮಿನಿ ನ್ಯೂಸ್

### ಗ್ರಾಮೀಣ ಭಾಗಗಳಿಗೆ ಬಸ್ ಸಂಚಾರ ವ್ಯವಸ್ಥೆ ಮಾಡಿ

• ಉದಯವಾಹಿನಿ, ಮಾಲೂರು

ಮಾಲೂರು ತಾತ್ಕಾಲಿಕವಾಗಿ ನಗರದ ರೈಲ್ವೆ ಸೇತುವೆ ಬಳಿ ನಿರ್ಮಿಸಿರುವ ಬಸ್ ನಿಲ್ದಾಣದಲ್ಲಿ ಡಾಂಬರೀಕರಣ ಮಾಡಿಸಿ ಸ್ವಚ್ಚತೆಯನ್ನು ಕಾಪಾಡುವ ಮೂಲಕ ಮೂಲಭೂತ ಸವಲತ್ತುಗಳು ಒದಗಿಸುವ ಕೆಲಸ ಮಾಡುವಂತೆ ಶಾಸಕ ಕೆ.ವೈ.ನಂಜೇಗೌಡ ನಗರಸಭಾ ಅಧಿಕಾರಿಗಳಿಗೆ ಸೂಚಿಸಿದರು. ನಗರದ ರೈಲ್ವೆ ಸೇತುವೆ ಬಳಿ ತಾತ್ಕಾಲಿಕವಾಗಿ ನಗರಸಭೆಯಿಂದ ಮಾಡಿರುವ ಬಸ್ ನಿಲ್ದಾಣಕ್ಕೆ ಶಾಸಕರು ಹಾಗೂ ನಗರಸಭೆಯ ಅಧಿಕಾರಿಗಳು ಸಾರಿಗೆ ಸಂಸ್ಥೆಯ ಅಧಿಕಾರಿಗಳು ಪೊಲೀಸ್ ಇಲಾಖೆಯೊಂದಿಗೆ ಭೇಟಿ ನೀಡಿ ಬಸ್ ನಿಲ್ದಾಣದಲ್ಲಿನ ಬಸ್ಸುಗಳಿಗಾಗಿ ಕಾಯುತ್ತಿದ್ದ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳಿಂದ ಬಸ್ ನಿಲ್ದಾಣದಲ್ಲಿನ ಸಮಸ್ಯೆಗಳ ಬಗ್ಗೆ ಮಾಹಿತಿಯನ್ನು ಆಲಿಸಿ ಮಾತನಾಡಿದರು.

ನಗರದ ಬಸ್ ನಿಲ್ದಾಣವು ಸುಮಾರು 20 ಕೋಟಿಗೂ ಹೆಚ್ಚು ವೆಚ್ಚದಲ್ಲಿ ಸುಸಜ್ಜಿತವಾದ ಬಸ್ ನಿಲ್ದಾಣ ಕಾಮಗಾರಿ ಆರಂಭಗೊಂಡಿದ್ದು,ಇನ್ನೊಂದು ವರ್ಷದಲ್ಲಿ ಪೂರ್ಣಗೊಳ್ಳುವ ವಿಶ್ವಾಸವಿದೆ, ಬಸ್‌ನಿಲ್ದಾಣಕ್ಕೆ ಬೇರೆ ಮಾರ್ಗವಿಲ್ಲದೆ ಇಲ್ಲಿನ ರೈಲ್ವೆ ಸೇತುವೆ ಬಳಿ ಲೋಕೋಪಯೋಗಿ ಇಲಾಖೆಯ ಜಮೀನಿನಲ್ಲಿ ನಗರಸಭೆಯಿಂದ ಬಸ್ ನಿಲ್ದಾಣವನ್ನು ತಾತ್ಕಾಲಿಕವಾಗಿ ಮಾಡಿಸಿ ಪ್ರಯಾಣಿಕರಿಗೆ ಕೆಲವು ರೀತಿಯ ಸವಲತ್ತುಗಳನ್ನು ಒದಗಿಸಲಾಗಿದೆ.

ಆದರೂ ಸಹ ವಿದ್ಯಾರ್ಥಿಗಳು ಹಾಗೂ ಪ್ರಯಾಣಿಕರು ಕೆಲವು ಸಮಸ್ಯೆಗಳನ್ನು ಎದುರಿಸುತ್ತಿರುವದಾಗಿ ನನ್ನ ಗಮನಕ್ಕೆ ತಂದಿದ್ದಾರೆ ಎಂದರು.

### ದೇಗುಲ ಮಠ : ಜು.3ರಂದು ಮುಮ್ಮಡಿ ನಿರ್ವಾಣ ಸ್ವಾಮೀಜಿಗಳ ಸಂಸ್ಮರಣೋತ್ಸವ


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ಇದೆ ಜು.3 ರಂದು ಲಿಂಗೈಕ್ಯ ಮುಮ್ಮಡಿ ನಿರ್ವಾಣ ಸ್ವಾಮೀಜಿಗಳ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದ್ದು ಸಿಎಂ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ವಿ.ಸೋಮಣ್ಣ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ದೇಗುಲ ಮಠದ ನಿರ್ದೇಶಕ ಡಾ.ಎಂ.ಸಿ.ನಟರಾಜು ಹೇಳಿದರು.

ಕನಕಪುರದ ದೇಗುಲ ಮಠದಲ್ಲಿ ನಡೆದ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಜು.3 ರ ಬೆಳಗಿನಿಂದ ರಾತ್ರಿಯವರೆಗೆ ಹಲವು ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿದೆ ಬೆಳಿಗ್ಗೆ ಮಹಾರುದ್ರಾಭಿಷೇಕ, ಸ್ವಾಮೀಜಿಗಳ ಮೆರವಣಿಗೆ, 108 ಸ್ವಾಮೀಜಿಗಳಿಗೆ ಪಾದಪೂಜೆ, ವಿವಿಧ ಗಣ್ಯರಿಂದ ನುಡಿನಮನ, ಮಧ್ಯಾನ್ಹ ಗೀತ ನಮನ, ಸಂಜೆ ಅಮೃತನಾಯ್ದು ಅವರಿಂದ ಭೂ ಕೈಲಾಸ ಹರಿಕಥೆ, ನೃತ್ಯ ನಮನ, ಮಹದೇಶ್ವರ ನೃತ್ಯ ರೂಪಕ ಸೇರಿದಂತೆ ಹಲವು ಕಾರ್ಯಕ್ರಮಗಳಿವೆ ಎಂದರು.

ಸಿದ್ಧಗಂಗಾ ಶ್ರೀಗಳು, ಆಧಿಚುಂಚನಗಿರಿ ಶ್ರೀಗಳು, ವಿವಿಧ ಮಠಾದೀಶರು, ಕೇಂದ್ರ ಸಚಿವರು, ಸಂಸದರು, ಶಾಸಕರು ಸೇರಿದಂತೆ ಹಲವರು ಗಣ್ಯರು ಭಾಗವಹಿಸಲಿದ್ದಾರೆ. ಇಪ್ಪತ್ತು ಸಾವಿರಕ್ಕೂ ಅಧಿಕ ಭಕ್ತಾಧಿಗಳು ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಎಲ್ಲರಿಗೂ ದಿನಪೂರ್ತಿ ದಾಸೋಹ ವ್ಯವಸ್ಥೆ, ಕುಡಿಯುವ ನೀರು, ತಾತ್ಕಾಲಿಕ ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.ಮಠದ ವಿಶೇಷಾಧಿಕಾರಿ ರವಿಶಂಕರ್, ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ, ತಿಪ್ಪೆಸ್ವಾಮಿ, ಬಿಇಡಿ ಕಾಲೇಜು ಪ್ರಾಂಶುಪಾಲರಾದ ನಾಗೇಂದ್ರ ಅವರು ಸುದ್ದಿಗೋಷ್ಠಿಯಲ್ಲಿದ್ದರು.

### ಚಿಂತಾಮಣಿ ನಗರದ ಟ್ರಾಫಿಕ್ ಸಮಸ್ಯೆಗೆ ಮುಕ್ತಿ ನೀಡಿ: ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಕೆ ಆರ್ ಎಸ್ ಪಕ್ಷದಿಂದ ಮನವಿ

• ಉದಯವಾಹಿನಿ, ಚಿಂತಾಮಣಿ

ನಗರದಲ್ಲಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ವಾಹನ ದಟ್ಟಣೆ ಹಾಗೂ ಅಸ್ತವ್ಯಸ್ತ ಸಂಚಾರ ಸಮಸ್ಯೆಯನ್ನು ನಿಯಂತ್ರಣಕ್ಕೆ ತರುವಂತೆ ಆಗ್ರಹಿಸಿ, ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಚಿಂತಾಮಣಿ ತಾಲ್ಲೂಕು ಸಮಿತಿಯು ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಕುಶಾಲ್ ಚೌಕ್ಸೆ ರವರಿಗೆ ಚಿಂತಾಮಣಿ ನಗರ ಠಾಣೆಯ ಸಬ್’ಇನ್ಸ್ಪೆಕ್ಟರ್ ರಮೇಶ್ ಮುಖಾಂತರ ಮನವಿ ಪತ್ರ ಸಲ್ಲಿಸಿದರು. ನಗರದ ಪ್ರಮುಖ ರಸ್ತೆಗಳಾದ ಎಂ.ಜಿ.ರಸ್ತೆ, ಚೇಳೂರು ರಸ್ತೆ, ಕೆ.ಎಸ್.ಆರ್.ಟಿ.ಸಿ.ಬಸ್ ನಿಲ್ದಾಣ ರಸ್ತೆ, ಶ್ರೀನಿವಾಸಪುರ ರಸ್ತೆ, ಎಸ್.ಎಲ್.ಎನ್.ಟಾಕೀಸ್ ಮುಂಭಾಗದ ರಸ್ತೆ ಹಾಗೂ ಪ್ರಮುಖ ಮಾರುಕಟ್ಟೆ ಪ್ರದೇಶಗಳಲ್ಲಿ ವಾಹನಗಳ ಸಂಚಾರ ಅಸ್ತವ್ಯಸ್ತಗೊಂಡಿದೆ. ಅನಿಯಮಿತ ವಾಹನ ನಿಲುಗಡೆ, ರಸ್ತೆ ಬದಿಯ ಅತಿಕ್ರಮಣ,ಸಂಚಾರ ನಿಯಮಗಳ ಉಲ್ಲಂಘನೆ ಹಾಗೂ ಭಾರಿ ವಾಹನಗಳ ಅವ್ಯವಸ್ಥಿತ ಸಂಚಾರದಿಂದಾಗಿ ಸಾರ್ವಜನಿಕರು ಪ್ರತಿನಿತ್ಯ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ವಿಶೇಷವಾಗಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಹಿರಿಯ ನಾಗರಿಕರು, ಮಹಿಳೆಯರು ಹಾಗೂ ತುರ್ತು ಸೇವೆಗಳ ವಾಹನಗಳು ರಸ್ತೆ ದಾಟಲು ಮತ್ತು ಸಂಚರಿಸಲು ಹರಸಾಹಸ ಪಡಬೇಕಾಗಿದ್ದು, ಅಪಘಾತಗಳ ಭಯವೂ ಹೆಚ್ಚಾಗಿದೆ ಎಂದು ಮನವಿಯಲ್ಲಿ ಕಳವಳ ವ್ಯಕ್ತಪಡಿಸಲಾಗಿದೆ. ಚಿಂತಾಮಣಿ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚಾರ ಪೊಲೀಸ್ ಸಿಬ್ಬಂದಿಯನ್ನು ಹೆಚ್ಚುವರಿಯಾಗಿ ನಿಯೋಜಿಸಬೇಕು. ಅನಧಿಕೃತ ರಸ್ತೆ ಬದಿಯ ವಾಹನ ನಿಲುಗಡೆ ಹಾಗೂ ಅತಿಕ್ರಮಣಗಳನ್ನು ತೆರವು ಗೊಳಿಸಲು ವಿಶೇಷ ಕಾರ್ಯಾಚರಣೆ ನಡೆಸಬೇಕು.

### ಅಧಿಕಾರಿಗಳು ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಅಭಾವವಾಗದಂತ್ತೆ ಕ್ರಮವಹಿಸಿ: ಶಾಸಕ ಕೆ.ವೆಂಕಟೇಶ್ ಸೂಚನೆ

• ಉದಯವಾಹಿನಿ, ಪಿರಿಯಾಪಟ್ಟಣ

ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಶೀಘ್ರದಲ್ಲಿ ಕ್ರಮಕೈಗೊಳ್ಳುವಂತ್ತೆ ತಾಲ್ಲೂಕು ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಕಾಧಿಕಾರಿ ಸುನೀಲ್ ಕುಮಾರ್ ರವರಿಗೆ ಶಾಸಕ ಕೆ.ವೆಂಕಟೇಶ್ ಖಡಕ್ ಸೂಚನೆ ನೀಡಿದರು.

ರಾಜಾನಬಿಗುಳಿ ಗ್ರಾಮದಲ್ಲಿ ಎರಡು ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ನಂತರ ಸಾರ್ವಜನಿಕರಿಂದ್ದ ಕುಂದುಕೊರತೆ ಆಲಿಸಿ ಮಾತನಾಡಿದರು.

ಗ್ರಾಮದಲ್ಲಿ ಕುಡಿಯುವ ನೀರಿಗೆ ಸಾಕಷ್ಟು ಸಮಸ್ಯೆಯಾಗಿದ್ದು ಪಂಚಾಯಿತಿ ಅಧಿಕಾರಿಗಳು ನಿರ್ಲಕ್ಷವಹಿಸುತ್ತಿದ್ದಾರೆ. ಸಮೀಪದ ಕರಿಗುಡ್ಡ ಕಾವಲು ಭಾಗದ ರೈತರಿಗೆ ಜಮೀನಿಗೆ ಹೋಗಲು ಸೂಕ್ತ ರಸ್ತೆ ಇಲ್ಲದಾಗಿದೆ. ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಅಧಿಕಾರಿಗಳಿಗೆ ದೂರು ನೀಡಿದರು ಪ್ರಯೋಜನವಾಗುತ್ತಿಲ್ಲ ಎಂದು ಶಾಸಕರ ಮುಂದೆ ಗ್ರಾಮಸ್ಥರು ಅಳಲು ತೋಡಿಕೊಂಡರು. ಸಮಸ್ಯೆ ಆಲಿಸಿದ ಶಾಸಕ ಕೆ. ವೆಂಕಟೇಶ್ ರವರು ಮಳೆ ಇಲ್ಲದೆ ಜನ ಸಾಮಾನ್ಯರು ಬಹಳ ತೊಂದರೆ ಅನುಭವಿಸುತ್ತಿದ್ದಾರೆ. ಕುಡಿಯುವ ನೀರಿಗೆ ಸಮಸ್ಯೆ ಆಗಿದೆ ಎಂದು ಅಧಿಕಾರಿಗಳ ಗಮನಕ್ಕೆ ತಂದರೂ ಏಕೆ ಬಗೆಹರಿಸಿಲ್ಲ ಎಂದು ತರಾಟೆಗೆ ತೆಗೆದುಕೊಂಡರು. ಈ ಕೂಡಲೆ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಗದಂತ್ತೆ ಸೂಕ್ತ ಕ್ರಮವಹಿಸಿ. ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿ. ಮೂರು ದಿನಕ್ಕೊಂದು ಬಾರಿ ನೀರು ಕೊಟ್ಟರೆ ಜನರು ಹೇಗೆ ಬದುಕುವುದು.

